ವಿಶ್ವವಾಣಿ
ವಿಶ್ವಾಸವೇ ವಿಶ್ವ

ಸೂರ್ಯನ ಕೈಹಿಡಿಯಲಿರುವ ಚಂದ್ರ ಚಕೋರಿ

ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯಗೆ ಕಂಕಣ ಭಾಗ್ಯ
ಚೆನ್ನೈ ಮೂಲದ ಗಾಯಕಿ ಸಿವಶ್ರೀ ಜತೆ ಮಾರ್ಚ್ 4ಕ್ಕೆ ವಿವಾಹ



ವಿಶ್ವವಾಣಿ ವಿಶೇಷ

ಬೆಂಗಳೂರು: 'ಯಂಗ್ ಆ್ಯಂಡ್ ಡೈನಾಮಿಕ್' ಮತ್ತು 'ಮೋಸ್ಟ್ ಎಲಿಜಿಬಲ್ ಬ್ಯಾಚುಲರ್' ಸಂಸದ ಎಂದೇ ಕರೆಯಿಸಿಕೊಂಡಿರುವ ತೇಜಸ್ವಿ ಸೂರ್ಯ ಅವರ ವಿವಾಹ ಯಾವಾಗ ಎನ್ನುವ ಪ್ರಶ್ನೆ ಪದೇ ಪದೆ ಚರ್ಚೆಗೆ ಬರುವ ವಿಷಯ. ಹಲವು ಸಂದರ್ಭಗಳಲ್ಲಿ ಈ ಬಗ್ಗೆ ತೇಜಸ್ವಿ ಸೂರ್ಯ ಅವರನ್ನೇ ಕೇಳಿದ್ದರೂ ಅವರು ಗುಟ್ಟನ್ನು ರಟ್ಟು ಮಾಡಿರಲಿಲ್ಲ. ಆದರೀಗ ಹೆಚ್ಚು ಸದ್ದಿಲ್ಲದೇ, ಸೂರ್ಯ 'ಚಂದ್ರ' ಚಕೋರಿಯನ್ನು ವರಿಸಲು ಸಿದ್ಧತೆ ನಡೆಸಿದ್ದಾರೆ ಎಂದು ಗೊತ್ತಾಗಿದೆ. ಸಂಸದ ತೇಜಸ್ವಿ ಸೂರ್ಯ ಅವರು ಇದೀಗ ಗಾಯಕಿ, ಭರತನಾಟ್ಯ ಕಲಾವಿದೆಯಾಗಿರುವ ಚೆನ್ನೈ ಮೂಲದ ಸಿವಶ್ರೀ ಸ್ಕಂದಕುಮಾರ್ ಎನ್ನುವವರನ್ನು ವರಿಸಲು ಸಜ್ಜಾಗಿದ್ದಾರೆ. ಈಗಾಗಲೇ ಎರಡು ಕುಟುಂಬಗಳೂ ಈ ವಿವಾಹಕ್ಕೆ ಒಪ್ಪಿಗೆಯ ಮುದ್ರೆ ಹಾಕಿದ್ದು, ಮಾರ್ಚ್ 4ಕ್ಕೆ ವಿವಾಹ ನಡೆಯಲಿದೆ ಎಂದು ಆಪ್ತ ಮೂಲಗಳು ತಿಳಿಸಿವೆ. ಈ ಮೂಲಕ ಬಹಳ ದಿನಗಳಿಂದ ಅಸಂಖ್ಯ ಯುವತಿಯರ 'ನಿದ್ದೆ ಕದ್ದ' ಸಂಸದನಿಗೆ ಕಂಕಣ ಭಾಗ್ಯ ಕೂಡಿ ಬಂದಿದೆ.

ತೇಜಸ್ವಿ ಸೂರ್ಯ ಅವರ ವಿವಾಹ ಮಾರ್ಚ್ 4ಕ್ಕೆ ನಿಗದಿಯಾಗಿದೆ ಎಂದು ಮೂಲಗಳು ತಿಳಿಸಿದ್ದರೂ ಈ ಬಗ್ಗೆ ತೇಜಸ್ವಿ ಸೂರ್ಯ ಅಥವಾ ಸಿವಶ್ರೀ ಸ್ಕಂದಪ್ರಸಾದ್ ಅವರು ಬಹಿರಂಗವಾಗಿ ಎಲ್ಲಿಯೂ ಹೇಳಿಕೊಂಡಿಲ್ಲ. ವಿವಾಹ ನಡೆಯುವ ಸ್ಥಳ ಸೇರಿದಂತೆ ಹಲವು ಅಂಶಗಳು ಇನ್ನಷ್ಟೇ ಬಹಿರಂಗವಾಗಬೇಕಿದೆ.

29 ವರ್ಷಕ್ಕೆ ಬೆಂಗಳೂರು ಸಂಸದನಾಗಿ ಲೋಕಸಭೆಗೆ ಆಯ್ಕೆಯಾಗಿದ್ದ ತೇಜಸ್ವಿ ಸೂರ್ಯ ಅವರು ತಮ್ಮ 34ನೇ ವಯಸ್ಸಿಗೆ ಎರಡನೇ ಬಾರಿಗೆ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಸಂಸದರಾಗಿದ್ದರೂ, ತೇಜಸ್ವಿ ಸೂರ್ಯ ಅವರು ಸೈಕ್ಲಿಂಗ್, ವಾಕಥಾನ್ ಸೇರಿದಂತೆ ವಿವಿಧ ಕ್ರೀಡಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಗೆಲುವು ಸಾಧಿಸಿದ್ದಾರೆ. ಇತ್ತೀಚೆಗೆ ಗೋವಾದಲ್ಲಿ ನಡೆದ ಐರನ್ ಮ್ಯಾನ್ ಮ್ಯಾರಥಾನ್‌ನಲ್ಲಿ ಗೆಲ್ಲುವ ಮೂಲಕ ಈ ಸ್ಪರ್ಧೆಯಲ್ಲಿ ಗೆಲುವು ಸಾಧಿಸಿದ ಮೊದಲ ಸಂಸದ ಎನಿಸಿಕೊಂಡಿದ್ದಾರೆ. ಈ ಸ್ಪರ್ಧೆಯಲ್ಲಿ ಸಿವಶ್ರೀ ಅವರೂ ಭಾಗವಹಿಸಿದ್ದರೆನ್ನುವುದು ವಿಶೇಷ.

ಯಾರೀಕೆ ಸಿವಶ್ರೀ ಸ್ಕಂದಪ್ರಸಾದ್?

ಸಿವಶ್ರೀ ಸ್ಕಂದಪ್ರಸಾದ್ ಅವರು ಶಾಸ್ತ್ರೀಯ ಸಂಗೀತ ಗಾಯಕಿ ಹಾಗೂ ಭರತನಾಟ್ಯ ಕಲಾವಿದೆ. ಶಾಸ್ತ್ರ ವಿಶ್ವವಿದ್ಯಾಲಯದಲ್ಲಿ ಬಯೋ ಎಂಜಿನಿಯರಿಂಗ್ ವಿಷಯದಲ್ಲಿ ಬಿ.ಟೆಕ್ ಪದವಿ ಪಡೆದಿದ್ದಾರೆ. ಇದರೊಂದಿಗೆ ಮದ್ರಾಸ್ ವಿಶ್ವವಿದ್ಯಾಲಯದಿಂದ ಭರತನಾಟ್ಯದಲ್ಲಿ ಎಂಎ ಪದವಿ, ಮದ್ರಾಸ್ ಸಂಸ್ಕೃತ ಕಾಲೇಜಿನಲ್ಲಿ ಸಂಸ್ಕೃತ ಎಂಎ ಪದವಿ ಪಡೆದು ಕೊಂಡಿದ್ದಾರೆ. ಇದರೊಂದಿಗೆ ಸೈಕ್ಲಿಂಗ್, ಟ್ರೆಕ್ಕಿಂಗ್ ವಾಕಥಾನ್‌ಗಳಲ್ಲಿಯೂ ಆಸಕ್ತಿ ಹೊಂದಿದ್ದಾರೆ. ಸಿವಶ್ರೀ ಅವರ ಯೂಟ್ಯೂಬ್ ಚಾನೆಲ್‌ಗೆ ಸುಮಾರು ಎರಡು ಲಕ್ಷ ಫಾಲೋವರ್ಸ್ ಇದ್ದಾರೆ.

ವಿವರಪುಟ → 5

ಪುಟ ತೆರೆದಂತೆ...

ಪರೀಕ್ಷೆ ನಡೆಸುವ ಆಯೋಗದ ಮೌಲ್ಯ ಹೆಚ್ಚಲಿ!
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ

ಸಂ.ಪುಟ | 6

ಬದಲಾದ ಮೌಲ್ಯ, ಬದಲಾದ ಶಿಕ್ಷಣ!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ

ಸಂ.ಗಮ | 7

ಮಾತಂದ್ರೆ ಮಾತು

ಕೇರಳ ಮಿನಿ ಪಾಕಿಸ್ತಾನ. ಅದಕ್ಕಾಗಿಯೇ ರಾಹುಲ್ ಗಾಂಧಿ ಹಾಗೂ ಅವರ ಸಹೋದರಿ ಅಲ್ಲಿಂದ ಗೆಲುವು ಸಾಧಿಸಿದ್ದಾರೆ. ಎಲ್ಲ ಭಯೋತ್ಪಾದಕರು ಅವರಿಗೆ ಮತ ಹಾಕುತ್ತಾರೆ. ನಾನು ಸತ್ಯವನ್ನೇ ಹೇಳುತ್ತಿದ್ದೇನೆ. ಇವರೆಲ್ಲಾ ಭಯೋತ್ಪಾದಕರ ನೆರವಿನಿಂದ ಸಂಸದರಾಗುತ್ತಿದ್ದಾರೆ.

-ನಿತೇಶ್ ರಾಣೆ
ಮೀನುಗಾರಿಕಾ ಸಚಿವ, ಮಹಾರಾಷ್ಟ್ರ

ದಾರಿದೀಪೋಕ್ತಿ

ಯಾವತ್ತೂ ನಾಳೆ ಮಾಡುತ್ತೇನೆ ಎಂದು ಹೇಳಬಾರದು. ಈ ದಿನವೇ ಮಾಡುತ್ತೇನೆ, ಈಗಲೇ ಮಾಡುತ್ತೇನೆ ಎಂಬ ಮನೋಭಾವ ಬೆಳೆಸಿಕೊಳ್ಳಬೇಕು. ಅವೆಷ್ಟೋ ದಿನಗಳಿಂದ ನೀವು ಇವತ್ತಿನ ಆಗಮನಕ್ಕೆ ಕನವರಿಸುತ್ತಿರಬಹುದು. ನಾಳೆ ಬರುವುದೋ, ಇಲ್ಲವೋ ಯಾರಿಗೆ ಗೊತ್ತು?

ವಕ್ರತುಂಡೋಕ್ತಿ

ಎಲ್ಲರಿಗೂ ಮಕ್ಕಳನ್ನು ಹೇಗೆ ಬೆಳೆಸಬೇಕು ಎಂಬುದು ಗೊತ್ತು, ಹೆತ್ತವರ ಹೊರತಾಗಿ.

ಪ್ರಿಯಾಂಕ್ ಖರ್ಗೆ ಮನವಿ ಬೆನ್ನಲ್ಲೇ ಸಿಎಂ ಆದೇಶ

ಸಚಿನ್ ಆತ್ಮಹತ್ಯೆ ಸಿಐಡಿ ತನಿಖೆಗೆ

ಬೆಂಗಳೂರು: ರಾಜ್ಯದಲ್ಲಿ ಭಾರಿ ವಿವಾದಕ್ಕೆ ಕಾರಣವಾಗಿರುವ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣವನ್ನು ಸಿಐಡಿಗೆ ವಹಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೆಸರು ಕೇಳಿಬಂದಿದೆ. ಡೆತ್‌ನೋಟ್‌ನಲ್ಲಿ ಖರ್ಗೆ ಆಪ್ತ ರಾಜು ಎನ್ನುವವರ ಹೆಸರು ಬರೆದು ಆತ್ಮಹತ್ಯೆ ಮಾಡಿಕೊಂಡಿರುವುದರಿಂದ, ಸಚಿವ ಸ್ಥಾನಕ್ಕೆ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಆಗ್ರಹಿಸುತ್ತಿದೆ. ಈ ಪ್ರಕರಣದಲ್ಲಿ ತಮ್ಮ ಪಾತ್ರವಿಲ್ಲವೆಂದು ಈಗಾಗಲೇ ಸ್ಪಷ್ಟಪಡಿಸಿರುವ ಪ್ರಿಯಾಂಕ್ ಖರ್ಗೆ, ಇದೀಗ ಇಡೀ ಪ್ರಕರಣದ ಸಮಗ್ರ ತನಿಖೆಯನ್ನು ಸಿಐಡಿಯಿಂದ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದರು. ಇದರ ಬೆನ್ನಲ್ಲೇ ಪ್ರಕರಣವನ್ನು ಸಿಐಡಿಗೆ ವಹಿಸಲು ಸರಕಾರ ಮುಂದಾಗಿದೆ.

ಸಿಬಿಐಗೆ ವಹಿಸಲು ಬಿಜೆಪಿ ಆಗ್ರಹ: ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ, ಈ ಹಿಂದೆ ಈ ರೀತಿಯ ಆರೋಪ ಕೇಳಿಬಂದಾಗ ಸಚಿವರ ರಾಜೀನಾಮೆ ಪಡೆದಿರುವ ಉದಾಹರಣೆ ಇದೆ. ಬಿಜೆಪಿಯ ಈಶ್ವರಪ್ಪ ಅವರೂ ರಾಜೀನಾಮೆ ನೀಡಿದ್ದರು. ಆದ್ದರಿಂದ ಪ್ರಿಯಾಂಕ್ ವಿರುದ್ಧ ಕೇಳಿಬಂದಿರುವ ಆರೋಪದ ತನಿಖೆ ಮುಗಿಯುವ ತನಕ ಅವರು ರಾಜೀನಾಮೆ ನೀಡಬೇಕು. ಪ್ರಕರಣವನ್ನು ಸಿಐಡಿಯಿಂದ ತನಿಖೆ ನಡೆಸಿದರೆ ನ್ಯಾಯ ಸಿಗುವುದಿಲ್ಲವೆಂದು ಈಗಾಗಲೇ ಕುಟುಂಬಸ್ಥರು ಹೇಳಿರುವುದರಿಂದ, ಇಡೀ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಬಿಜೆಪಿಗರು ಆಗ್ರಹಿಸಿದ್ದಾರೆ.

ಸಚಿನ್ ದುಡ್ಡು ಕೊಡಬೇಕಿತ್ತು

ಗುತ್ತಿಗೆದಾರ ಸಚಿನ್ ಪಾಂಚಾಳ್ ಅವರ ಆತಹತ್ಯೆ ಪ್ರಕರಣಕ್ಕೆ ತಿರುವು ದೊರೆತಿದ್ದು, ಆರೋಪಿ ರಾಜ ಕಪನೂರು ಅವರ ಸಹೋದರ ಪ್ರಕಾಶ್ ಕಪನೂರು ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ. ಅದರಲ್ಲಿ ರಾಜು ಕಪನೂರು ಅವರಿಗೆ ಸಚಿನ್ 60 ಲಕ್ಷ ನೀಡಬೇಕಿತ್ತು ಎನ್ನುವ ಮಾಹಿತಿಯಿದೆ.

ಫೋಟೋ ಬಿಡುಗಡೆ ಮಾಡಿದ ವಿಜಯೇಂದ್ರ

ಗುತ್ತಿಗೆದಾರ ಸಚಿನ್ ಡೆತ್‌ನೋಟ್‌ನಲ್ಲಿ ಪ್ರಸ್ತಾಪಿಸಿರುವ ರಾಜು ಎನ್ನುವ ವ್ಯಕ್ತಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವ ಪ್ರಿಯಾಂಕ್ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ನಾಯಕರೊಂದಿಗೆ ಇರುವ ಫೋಟೋಗಳನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬಿಡುಗಡೆಗೊಳಿಸಿದ್ದಾರೆ.

ಬಿಜೆಪಿ ಆಗ್ರಹವೇನು?

- ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವರ ಪಿಎ ಹೆಸರಿದೆ
- ಆದ್ದರಿಂದ ಈ ಕೂಡಲೇ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಲಿ
- ಪ್ರಕರಣವನ್ನು ಸಿಐಡಿ ಬದಲಿಗೆ ಸಿಬಿಐನಿಂದ ತನಿಖೆಯಾಗಬೇಕು
- ಈಶ್ವರಪ್ಪ ವಿರುದ್ಧ ದೂರು ಬಂದಾಗ ರಾಜೀನಾಮೆ ನೀಡಿದಂತೆ ಪ್ರಿಯಾಂಕ್ ನೀಡಲಿ

ಕಾಂಗ್ರೆಸ್ ವಾದವೇನು?

- ಗುತ್ತಿಗೆದಾರ ಸಚಿವ ಪ್ರಕರಣಕ್ಕೂ ಪ್ರಿಯಾಂಕ್ ಖರ್ಗೆಗೂ ಸಂಬಂಧವಿಲ್ಲ
- ಹೆಚ್ಚುವರಿ ತನಿಖೆ ನಡೆಯಬೇಕು ಎನ್ನುವ ಕಾರಣಕ್ಕೆ ಸಿಐಡಿಗೆ ವರ್ಗಾವಣೆ
- ಬಿಜೆಪಿ ಹೇಳಿದ ಮಾತ್ರಕ್ಕೆ ಪ್ರಕರಣವನ್ನು ಸಿಬಿಐಗೆ ವಹಿಸುವ ಅಗತ್ಯವಿಲ್ಲ
- ಡೆತ್‌ನೋಟ್‌ನಲ್ಲಿ ಪ್ರಿಯಾಂಕ್ ಹೆಸರಿಲ್ಲ. ಆದ್ದರಿಂದ ರಾಜೀನಾಮೆ ಅಗತ್ಯವಿಲ್ಲ

ಸಿಬಿಐ ತನಿಖೆಗೆ ಸಚಿನ್ ಕುಟುಂಬವೂ ಒತ್ತಾಯಿಸಿದೆ. ಈ ಹಿಂದೆ ಸಚಿವ ನಾಗೇಂದ್ರ ಅವರು ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ. ಆದ್ದರಿಂದ ಒಂದು ಕ್ಷಣವೂ ತಡ ಮಾಡದೆ ಪ್ರಿಯಾಂಕ್ ಖರ್ಗೆಯವರ ರಾಜೀನಾಮೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪಡೆದುಕೊಳ್ಳಬೇಕು.

- ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ಮೊದಲು ದಾಖಲೆ ತೋರಿಸಿ ರಾಜೀನಾಮೆ ಕೇಳಲಿ. ಅದು ಬಿಟ್ಟು ಆರೋಪ ಮಾಡಿದಾಕ್ಷಣ ರಾಜೀನಾಮೆ ಕೊಡಬೇಕೆ? ನಮ್ಮ ಮನೆಗೆ ಮುತ್ತಿಗೆ ಹಾಕಲಿ, ಬೇಡ ಅಂದವರು ಯಾರು? ಜನರು ನಗುತ್ತಿದ್ದಾರೆ, ದಾಖಲೆ ಇಲ್ಲದೆ ಯಾಕೆ ಪ್ರತಿಭಟನೆ ಮಾಡುತ್ತಾರೆ? ಏನಂಥ ಮುತ್ತಿಗೆ ಹಾಕುತ್ತೀರಿ? ನಿಮಗೆ ನಾಚಿಕೆ ಆಗಬೇಕು.

- ಪ್ರಿಯಾಂಕ್ ಖರ್ಗೆ ಸಚಿವ

ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಪಾತ್ರವಿಲ್ಲ. ಆತ್ಮಹತ್ಯೆ ಪತ್ರದಲ್ಲಿ ಅವರ ವಿರುದ್ಧ ನೇರ ಆರೋಪವಿಲ್ಲ. ಬೇರೆಯವರ ಮೇಲೆ ಆರೋಪ ಮಾಡಿದಾಕ್ಷಣ ಇವರು ರಾಜೀನಾಮೆ ನೀಡಲು ಸಾಧ್ಯ ವಿಲ್ಲ. ಪ್ರಿಯಾಂಕ್ ಖರ್ಗೆ ಪ್ರಾಮಾಣಿಕತೆ ಬಗ್ಗೆ ನಮಗೆ ಗೊತ್ತಿದೆ. ಗುತ್ತಿಗೆದಾರನ ಸಾವಿನ ಬಗ್ಗೆ ಕಾನೂನು ಪ್ರಕಾರ ತನಿಖೆ ನಡೆಯುತ್ತದೆ.

- ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ

ಕೆಎಸ್‌ಡಿಎಲ್ ಅಧಿಕಾರಿ ಆತ್ಮಹತ್ಯೆ

ಬೆಂಗಳೂರು: ಕರ್ನಾಟಕ ಸಾಬೂನು ಹಾಗೂ ಮಾರ್ಜಕ ನಿಯಮಿತ (ಕೆಎಸ್‌ಡಿಎಲ್) ಖರೀದಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ.

ಅಮೃತ್ ಶಿರೂರು (42) ಆತ್ಮಹತ್ಯೆಗೆ ಶರಣಾದ ಅಧಿಕಾರಿ. ಅಮೃತ್ ಅವರು ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಸವಾಗಿದ್ದರು. ಡಿ.28ರ ಸಂಜೆ 5ಗಂಟೆ ಸುಮಾರಿಗೆ ಆತ್ಮಹತ್ಯೆಗೆ ಶರಣಾಗಿದ್ದಾರೆ. ಘಟನೆ ಸಂಬಂಧ ಪರಿಶೀಲನೆ ನಡೆಸಿ ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸುಚಿರ್ ಸಾವಿನ ಬಗ್ಗೆ ಮಸ್ಕ್ ಶಂಕೆ

ವಾಷಿಂಗ್ಟನ್: ಅಮೆರಿಕದಲ್ಲಿ ಕೆಲಸ ಮಾಡುತ್ತಿದ್ದ ಒಪನ್ ಎಐ ಕಂಪನಿ ಉದ್ಯೋಗಿ ಹಾಗೂ ಅನ್ಯಾಯಗಳ ವಿರುದ್ಧ ಸದಾ ಧ್ವನಿ ಎತ್ತುತ್ತಿದ್ದ ಸುಚಿರ್ ಬಾಲಾಜಿ ಅವರ ಸಾವು ಆತ್ಮಹತ್ಯೆಯಂತೆ ಕಾಣುತ್ತಿಲ್ಲ ಎಂದು ಸ್ಪೇಸ್ ಎಕ್ಸ್‌ನ ಮುಖ್ಯಸ್ಥ ಇಲಾನ್ ಮಸ್ಕ್ ಅನುಮಾನ ವ್ಯಕ್ತಪಡಿಸಿದ್ದಾರೆ.

ಸುಚಿರ್ ಅವರ ತಾಯಿ ಪೂರ್ಣಿಮಾ ರಾಮರಾವ್ ಅವರೂ, ಇದೊಂದು ವ್ಯವಸ್ಥಿತ ಸಂಚು ರೂಪಿಸಿದ ಕೊಲೆಯಾಗಿದ್ದು, ಈ ಕುರಿತು ಎಫ್‌ಬಿಐ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಪೂರ್ಣಿಮಾ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಮಸ್ಕ್, 'ಇದು ಆತ್ಮಹತ್ಯೆಯಂತೆ ಕಾಣಿಸುತ್ತಿಲ್ಲ' ಎಂದಿದ್ದಾರೆ.

ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆ; ಶೇ.50 ಅಭ್ಯರ್ಥಿಗಳು ಗೈರು

ಬೆಂಗಳೂರು: ಡಿ.29 ರಂದು ನಡೆದ ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆಗೆ ಅರ್ಧದಷ್ಟು ಅಭ್ಯರ್ಥಿಗಳು ಗೈರಾಗಿದ್ದಾರೆ. ಒಟ್ಟು 2,10,916 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಆ ಪೈಕಿ 1,01,237 ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದು, 1,09,673 ಗೈರು ಹಾಜರಾಗಿದ್ದಾರೆ.

ಮಲೆಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ

ಬೆಂಗಳೂರು: ಚಾಮರಾಜನಗರ ಜಿಲ್ಲೆಯ ಪ್ರಮುಖ ಪ್ರೇಕ್ಷಣೀಯ ಸ್ಥಳವಾಗಿರುವ ಮಲೆಮಹದೇಶ್ವರ ಬೆಟ್ಟದಲ್ಲಿ ಜನವರಿ ಮೂರನೇ ವಾರ ಸಚಿವ ಸಂಪುಟ ಸಭೆ ನಡೆಸಲು ಸರಕಾರ ತೀರ್ಮಾನಿಸಿದ್ದು, ಈಗಾಗಲೇ ಅಗತ್ಯ ಸಿದ್ಧತೆ ಆರಂಭಿಸಿದೆ. 2002ರಲ್ಲಿ ಎಸ್.ಎಂ.ಕೃಷ್ಣ ಅವರು ಬಿಳಿಗಿರಿ ರಂಗನ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿದ್ದರು. ಬಳಿಕ ಜಿಲ್ಲೆಯಲ್ಲಿ ನಡೆಯುತ್ತಿರುವ ಎರಡನೇ ಸಚಿವ ಸಂಪುಟ ಸಭೆ ಇದಾಗಿದೆ.

ಅಮೆರಿಕ ಮಾಜಿ ಅಧ್ಯಕ್ಷ ಜಿಮ್ಮಿ ಕಾರ್ಟರ್ ನಿಧನ

ವಾಷಿಂಗ್ಟನ್: ಅಮೆರಿಕದ 39ನೇ ಅಧ್ಯಕ್ಷರಾಗಿದ್ದ ಜಿಮ್ಮಿ ಕಾರ್ಟರ್ (100) ಜಾರ್ಜಿಯಾದ ಪ್ಲೇನ್ಸ್‌ನಲ್ಲಿರುವ ಅವರ ಮನೆಯಲ್ಲಿ ನಿಧನರಾಗಿದ್ದಾರೆ. ಜಾಕ್, ಚಿಪ್, ಜೆಫ್, ಆ್ಯಮಿ ಎಂಬ ನಾಲ್ವರು ಮಕ್ಕಳನ್ನು ಅಗಲಿರುವ ಜಿಮ್ಮಿ ಅವರಿಗೆ 11 ಮಂದಿ ಮೊಮ್ಮಕ್ಕಳು, 14 ಮಂದಿ ಮರಿಮೊಮ್ಮಕ್ಕಳಿದ್ದಾರೆ. 1977ರಿಮದ 1981ರವರೆಗೆ ಅವರು ಅಮೆರಿಕ ಅಧ್ಯಕ್ಷರಾಗಿದ್ದರು. 1777ರಲ್ಲಿ ತುರ್ತು ಪರಿಸ್ಥಿತಿ ತೆರವಾದ ಬಳಿಕ ಭಾರತಕ್ಕೆ ಭೇಟಿ ನೀಡಿದ್ದರು. ಅದರ ಗೌರವಾರ್ಥವಾಗಿ ಹರಿಯಾಣದ ಗ್ರಾಮಕ್ಕೆ ಕಾರ್ಟರ್‌ಪುರಿ ಎಂದು ಹೆಸರಿಡಲಾಗಿತ್ತು. ಅಮೆರಿಕ ಅಧ್ಯಕ್ಷ ಜೋ ಬೈಡನ್, ಪ್ರಧಾನಿ ನರೇಂದ್ರ ಮೋದಿ ಸೇರಿ ಹಲವು ದೇಶಗಳ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಪ್ರಕರಣದ ದಿಕ್ಕು ತಪ್ಪಿಸುತ್ತಿರುವ ಪೊಲೀಸರ ವಿರುದ್ಧ ಕ್ರಮಕ್ಕೆ ಆಗ್ರಹ

ರಾಜಭವನ ಮೆಟ್ಟಿಲೇರಿದ ಲಕ್ಷ್ಮೀ-ರವಿ ಗದ್ದಲ

ಬೆಂಗಳೂರು: ರಾಜ್ಯದಲ್ಲಿ ಸಾಕಷ್ಟು ವಿವಾದಕ್ಕೆ ಕಾರಣವಾದ 'ಆ' ಪದ ಬಳಕೆಯ ಪ್ರಕರಣ ರಾಜಭವನದ ಮೆಟ್ಟಿಲೇರಿದೆ.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ಬಿಜೆಪಿ ಮುಖಂಡರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಸೋಮವಾರ ದೂರು ನೀಡಿದ್ದು, ಬೆಳಗಾವಿಯಲ್ಲಿ ನಡೆದ ಘಟನಾವಳಿಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಈ ಪ್ರಕರಣದ ದಿಕ್ಕು ತಪ್ಪಿಸುತ್ತಿರುವ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಇತ್ತೀಚೆಗೆ ಬಿಜೆಪಿ ನಿಯೋಗ ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ದೂರು ನೀಡಿತ್ತು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿ.ಟಿ.ರವಿ, ಕಾಂಗ್ರೆಸ್ ಸರಕಾರ ಹತೆ, ಆತ್ಮಹತ್ಯೆಗಳ ರಾಜ್ಯವನ್ನಾಗಿ ಮಾಡಿದೆ. ಜತೆಗೆ ಇಬ್ಬಗೆ ನೀತಿ ಅನುಸರಿಸುತ್ತಿದೆ. ನನ್ನ ವಿರುದ್ಧ ದೂರು ದಾಖಲಾದ ತಕ್ಷಣ ಬಂಧಿಸಲಾಯಿತು. ಇಡೀ ರಾತ್ರಿ ಓಡಾಡಿಸಿ ನಿರ್ಜನ ಪ್ರದೇಶದಲ್ಲಿ ಎನ್‌ಕೌಂಟರ್ ಮಾಡಿ ಮುಗಿಸುವ ದುರುದ್ದೇಶವೂ ಸರಕಾರಕ್ಕಿತ್ತು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ಬಿಜೆಪಿ ಮುಖಂಡರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸೋಮವಾರ ಭೇಟಿಯಾಗಿ ದೂರು ನೀಡಿದರು.

ಆದರೆ, ಪೊಲೀಸ್ ವ್ಯಾನ್‌ಗಳನ್ನು ಮಾಧ್ಯಮಗಳ ವಾಹನಗಳು ಹಿಂಬಾಲಿಸುತ್ತಿದ್ದ ಕಾರಣ ಸಫಲವಾಗಲಿಲ್ಲ ಎಂದು ಆರೋಪಿಸಿದರು.

→ 4

ಐಶ್ವರ್ಯಾ ಗೌಡ ವಿರುದ್ಧ ಡಿಕೆಸು ದೂರು ದಾಖಲು

ಬೆಂಗಳೂರು: ತಮ್ಮ ಹೆಸರು ದುರುಪಯೋಗ ಮಾಡಿಕೊಂಡು ವಂಚನೆ ಮಾಡಿದ ಆರೋಪದ ಹಿನ್ನೆಲೆ ಐಶ್ವರ್ಯಾ ಗೌಡ ವಿರುದ್ಧ ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ. ಐಶ್ವರ್ಯ ಗೌಡ ಎಂಬುವವರು ನನ್ನ ಹೆಸರು ದುರುಪಯೋಗ ಮಾಡಿಕೊಂಡು ಹಲವರಿಗೆ ಚಿನ್ನಾಭರಣ ಹಾಗೂ ಹಣ ವಂಚನೆ ಮಾಡಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗುತ್ತಿವೆ. ಹೀಗಾಗಿ, ನನ್ನ ಹೆಸರು ಬಳಸಿಕೊಂಡು ವಂಚನೆ ನಡೆಸಿರುವವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಜನರಿಗೆ ಇಂತಹ ಅನ್ಯಾಯ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭಾರತದ್ದೇ ಬಾಹ್ಯಾಕಾಶ ನಿಲ್ದಾಣ ಸ್ಥಾಪನೆಯತ್ತ ಹೆಜ್ಜೆ
ಮಹತ್ವಾಕಾಂಕ್ಷಿ ಸ್ಪೇಸ್ ಡಾಕಿಂಗ್ ಯೋಜನೆ ಯಶಸ್ವಿ

ಇಸ್ರೋ ಹೊಸ ಮೈಲಿಗಲ್ಲು

ಆಂಧ್ರಪ್ರದೇಶ: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ 'ಸ್ಪೇಸ್ ಡಾಕಿಂಗ್ ಎಕ್ಸ್‌ಪರಿಮೆಂಟ್' (ಸ್ಪಾಡೆಕ್)ನ್ನು ಸೋಮವಾರ ರಾತ್ರಿ 10 ಗಂಟೆಗೆ ಯಶಸ್ವಿಯಾಗಿ ಉಡಾವಣೆ ಮಾಡಿದೆ. ಈ ಮೂಲಕ ವರ್ಷದ ಕೊನೆಯಲ್ಲಿ ಇಸ್ರೋ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿದೆ.

ಕೆಳ ಕಕ್ಷೆಯಲ್ಲಿ ಎರಡು ಬಾಹ್ಯಾಕಾಶ ನೌಕೆಗಳ ಸಂಧಿಸುವಿಕೆಗೆ ಮತ್ತು ಬೇರ್ಪಡಿಸುವಿಕೆಗೆ ಅಗತ್ಯವಾದ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಈ ಪ್ರಾಯೋಗಿಕ ಉಡಾವಣೆ ನಡೆಯಲಿದೆ. ಇದು ಸಂಕೀರ್ಣ ಬಾಹ್ಯಾಕಾಶ ಕಾರ್ಯಾಚರಣೆಗಳಿಗೆ ನಿರ್ಣಾಯಕವಾದ ತಂತ್ರಜ್ಞಾನವಾಗಿದೆ. ದೊಡ್ಡ ಗಾತ್ರದ ಬಾಹ್ಯಾಕಾಶ ನೌಕೆಗಳಿಗೆ ಹೋಲಿಸಿದರೆ ಸಣ್ಣ ನೌಕೆಗಳನ್ನು ಸೇರಿಸುವುದು ಕ್ಲಿಷ್ಟಕರ ಕಾರ್ಯ ಎಂದು ಇಸ್ರೋ ಹೇಳಿದೆ. ಮುಂದಿನ ಚಂದ್ರಯಾನ-4 ಯೋಜನೆಗೆ ಈ ಪ್ರಯೋಗದ ಯಶಸ್ಸು ಮುಖ್ಯವಾದುದಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಏನಿದು ಯೋಜನೆ?: ಇಸ್ರೋದ ಸ್ಪೇಸ್ ಡಾಕಿಂಗ್ ಪ್ರಯೋಗ (ಸ್ಪೆಡೆಕ್ಸ್) ಎಂಬ ವಿನೂತನ ಪ್ರಯೋಗದಲ್ಲಿ ನಭಕ್ಕೆ ಚಿಮ್ಮುವ ರಾಕೆಟ್‌ನಿಂದ ನಿಗದಿತ ಕಕ್ಷೆಯನ್ನು ತಲುಪುವ ಎರಡು ಅವಳಿ ಉಪಗ್ರಹಗಳು ಮೊದಲು ದೂರವಾಗಿ, ನಂತರ ಕ್ರಮವಾಗಿ ಹತ್ತಿರ ಸೇರುತ್ತ, ಆನಂತರ ಒಂದೇ ಆಗಿ ಕಾರ್ಯಾಚರಣೆ ನಡೆಸುವ ಯೋಜನೆ ಇದಾಗಿದೆ. ಈ ಯೋಜನೆ ಯಶಸ್ವಿಯಾದರೆ, ಭಾರತದ್ದೇ ಆದ ಬಾಹ್ಯಾಕಾಶ ನಿಲ್ದಾಣ ಸ್ಥಾಪನೆಗೆ ಈ ಪ್ರಯೋಗ ದಾರಿ ಮಾಡಿಕೊಡಲಿದೆ. ಆ ಮೂಲಕ ಬಾಹ್ಯಾಕಾಶ ನಿಲ್ದಾಣ ಸ್ಥಾಪಿಸಿರುವ ಜಗತ್ತಿನ 4ನೇ ರಾಷ್ಟ್ರವಾಗಿ ಭಾರತ ಇತಿಹಾಸ ಸೇರಲಿದೆ.

ಭಾರತದ ಮಹಿಳೆಯರಲ್ಲಿದೆ 24 ಸಾವಿರ ಟನ್ ಚಿನ್ನ!

ವಿಶ್ವದ ಶೇಕಡಾ 11ರಷ್ಟು ಚಿನ್ನ ಭಾರತೀಯರ ಮನೆಗಳಲ್ಲಿದೆ: ವರ್ಲ್ಡ್ ಗೋಲ್ಡ್ ಕೌನ್ಸಿಲ್ ಮಾಹಿತಿ

ಅಮೆರಿಕ, ಜರ್ಮನಿ, ಇಟಲಿ, ಫ್ರಾನ್ಸ್, ರಷ್ಯಾಗಳ ಒಟ್ಟು ಚಿನ್ನದ ಮೀಸಲಿಗಿಂತ ಹೆಚ್ಚು ಚಿನ್ನ ಭಾರತದಲ್ಲಿ

ಬೆಂಗಳೂರು: ಭಾರತೀಯರ ಪಾಲಿಗೆ ಚಿನ್ನ ಬದುಕಿನ ಭಾಗ. ಬಡವರಿರಲಿ, ಶ್ರೀಮಂತರಿರಲಿ ಮದುವೆ ಮುಂತಾದ ಶುಭ ಸಂದರ್ಭಗಳಲ್ಲಿ ಚಿನ್ನ ಧರಿಸದವರಿಲ್ಲ. ಒಂದು ಗ್ರಾಂ ಚಿನ್ನವಾದರೂ ಪೆಟ್ಟಿಗೆಯಲ್ಲಿಟ್ಟು ಕಾಪಿಡದ ಮನೆಗಳು ವಿರಳಾತಿ ವಿರಳ. ಇದು ಕೇವಲ ಶ್ರೀಮಂತಿಕೆಯ ಸಂಕೇತವಲ್ಲ, ದೇಶವಾಸಿಗಳ ಸಂಪ್ರದಾಯ, ಸಾಂಸ್ಕೃತಿಕ ಮೌಲ್ಯದಲ್ಲಿ ಚಿನ್ನಕ್ಕೆ ಮಹತ್ವದ ಸ್ಥಾನವಿದೆ.

ಇದೀಗ ಭಾರತದ ಮಹಿಳೆಯರ ಚಿನ್ನದ ದಾಸ್ತಾನಿನ ಬಗ್ಗೆ ಸ್ವತಃ ವರ್ಲ್ಡ್ ಗೋಲ್ಡ್ ಕೌನ್ಸಿಲ್ ಅಚ್ಚರಿ ವ್ಯಕ್ತಪಡಿಸಿದೆ. ಭಾರತದ ಮಹಿಳೆಯರಲ್ಲಿ ಕನಿಷ್ಠವೆಂದರೂ 24 ಸಾವಿರ ಟನ್ ಚಿನ್ನವಿದೆ. ಚಿನ್ನದ ಮಾಲೀಕತ್ವದಲ್ಲಿ ಇಂದು ಭಾರತವೇ ಜಾಗತಿಕ ನಾಯಕ ಎನಿಸಿದೆ. ವಿಶ್ವದ ಯಾವುದೇ ದೇಶಕ್ಕಿಂತ ಹೆಚ್ಚಿನ ಚಿನ್ನದ ನಿಧಿ (ಗೋಲ್ಡ್ ರಿಸರ್ವ್) ಭಾರತದ ಮಹಿಳೆಯರ ಬಳಿ ಇದೆ. ಇದು ಆಭರಣದ ಮಾದರಿಯಲ್ಲಿರುವ ಚಿನ್ನದ ಪೈಕಿ ವಿಶ್ವದ ಶೇ. 11ರಷ್ಟು ಎಂದು ಡಬ್ಲ್ಯುಜಿಸಿ ತಿಳಿಸಿದೆ.

ಭಾರತೀಯರ ಕೈಯಲ್ಲಿರುವ ಆಭರಣ ಚಿನ್ನದ ಸಂಗ್ರಹ, ಅಮೆರಿಕ, ರಷ್ಯಾ ಸೇರಿದಂತೆ ವಿಶ್ವದ ಪ್ರಮುಖ 5 ರಾಷ್ಟ್ರಗಳ ಒಟ್ಟು ಚಿನ್ನದ ಮೀಸಲಿಗಿಂತ ಹೆಚ್ಚಾಗಿದೆ. ಪ್ರಸ್ತುತ, ಅಮೆರಿಕ 8 ಸಾವಿರ ಟನ್ ಚಿನ್ನದ ದಾಸ್ತಾನು ಹೊಂದಿದ್ದರೆ, 2ನೇ ಸ್ಥಾನದಲ್ಲಿರುವ ಜರ್ಮನಿ ಬಳಿ 3300 ಟನ್ ಚಿನ್ನವಿದೆ. ಇಟಲಿ ಬಳಿ 2450 ಟನ್ ಚಿನ್ನವಿದ್ದರೆ, ಫ್ರಾನ್ಸ್ ದೇಶದ ಬಳಿ 2400 ಟನ್ ಹಾಗೂ ರಷ್ಯಾದ ಬಳಿ 1900 ಟನ್ ಚಿನ್ನದ ರಿಸರ್ವ್ ಇದೆ. ಈ ಐದೂ ದೇಶಗಳ ಚಿನ್ನದ ದಾಸ್ತಾನನ್ನು ಒಟ್ಟುಗೂಡಿಸಿದರೂ ಸಹ, ಭಾರತದ ಮಹಿಳೆಯರ ಬಳಿ ಇರುವ ಚಿನ್ನಕ್ಕೆ ಸರಿಸಮವಾಗುವುದಿಲ್ಲ ಎಂದು ಡಬ್ಲ್ಯುಜಿಸಿ ತಿಳಿಸಿದೆ.

ಆಕ್ಸ್‌ಫರ್ಡ್ ಗೋಲ್ಡ್ ಗ್ರೂಪ್ ಪ್ರಕಾರ, ಭಾರತದ ಮನೆಗಳಲ್ಲಿ ಇರುವ ಚಿನ್ನದ ಪ್ರಮಾಣ ವಿಶ್ವದ ಶೇ. 11ರಷ್ಟಾಗಿದೆ. ಇದು ಅಮೆರಿಕ, ಅಂತಾರಾಷ್ಟ್ರೀಯ ಹಣಕಾಸು ನಿಧಿ, ಸ್ವಿಜರ್ಲೆಂಡ್ ಹಾಗೂ ಜರ್ಮನಿ ದೇಶದ ಬಳಿ ಇರುವ ಚಿನ್ನದ ಮೀಸಲು ಪ್ರಮಾಣಕ್ಕಿಂತ ಭಾರೀ ಪ್ರಮಾಣದಲ್ಲಿ ಹೆಚ್ಚು

ಏನಿದೆ ನಿಯಮ: ಭಾರತದ ಆದಾಯ ತೆರಿಗೆ ಇಲಾಖೆಯ ನಿಯಮದ ಪ್ರಕಾರ, ವಿವಾಹಿತ ಮಹಿಳೆ ತನ್ನ ಬಳಿ 500 ಗ್ರಾಂ ಅಂದರೆ ಅರ್ಧ ಕಿಲೋ ಚಿನ್ನವನ್ನು ಹೊಂದಿರಲು ಅವಕಾಶವಿದೆ. ಅವಿವಾಹಿತ ಮಹಿಳೆ 250 ಗ್ರಾಂ ಚಿನ್ನವನ್ನು ತನ್ನ ಬಳಿ ಹೊಂದಿರಬಹುದು. ಆದರೆ, ಭಾರತದಲ್ಲಿ ಪುರುಷರು ಕೇವಲ 100 ಗ್ರಾಂ ಚಿನ್ನವನ್ನು ಮಾತ್ರವೇ ಹೊಂದಬಹುದು.

ದಕ್ಷಿಣದಲ್ಲೇ ಹೆಚ್ಚು

ಭಾರತದಲ್ಲಿ ಚಿನ್ನ ಹೊಂದಿರುವವರ ಪೈಕಿ ದಕ್ಷಿಣ ಭಾರತದ ಮಹಿಳೆಯರೇ ಮುಂಚೂಣಿಯಲ್ಲಿದ್ದಾರೆ. ಭಾರತದ ಒಟ್ಟಾರೆ ಚಿನ್ನದಲ್ಲಿ ಶೇ.40ರಷ್ಟು ಚಿನ್ನ ದಕ್ಷಿಣ ಭಾರತದಲ್ಲಿದೆ. ಈ ಪೈಕಿ ತಮಿಳುನಾಡು ರಾಜ್ಯವೊಂದರಲ್ಲೇ ಶೇ.28ರಷ್ಟು ಚಿನ್ನವಿದೆ. ಕೇರಳ, ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳಲ್ಲೂ ಮಹಿಳೆಯರಲ್ಲಿ ಚಿನ್ನದ ಬಗ್ಗೆ ವಿಪರೀತ ವ್ಯಾಮೋಹವಿದೆ. ಭಾರತದ ಆರ್ಥಿಕತೆಗೆ ಈ ಚಿನ್ನದ ಮೀಸಲು ಕೂಡ ಅಪಾರ ಕೊಡುಗೆ ನೀಡಿದೆ. ದೇಶದ ಜಿಡಿಪಿಗೆ ಹೋಲಿಸಿದರೆ ಶೇ.40ರಷ್ಟಾಗುತ್ತದೆ. ಈ ಮಾನದಂಡದಿಂದ ಅಳೆದರೆ ಭಾರತ ವಿಶ್ವದ ಅತಿ ಶ್ರೀಮಂತ ರಾಷ್ಟ್ರ ಎನಿಸಿಕೊಳ್ಳಲಿದೆ.

ಫನ್‌ತರಂಗ
- ರಘುಪತಿ ಶೃಂಗೇರಿ -

ಜನವರಿ 5ಕ್ಕೆ ರಾಜ್ಯಮಟ್ಟದ ಯುವಜನೋತ್ಸವ, ಊಟಕ್ಕೆ 'ಮಾಂಸಾಹಾರ' ಸುದ್ದಿ



ಸಮಾಚಾರ ಸಣ್ಣದಲ್ಲ

ನಾಯಿಯ ಜತೆ ಅಮಾನುಷ ವರ್ತನೆ

ಬೆಂಗಳೂರು: ದ್ವಿಚಕ್ರ ವಾಹನದ ಮೇಲೆ ನಾಯಿಯನ್ನು ಎಳೆದೊಯ್ದು ನಾಯಿಯ ಮಾಲೀಕ ಅಮಾನವೀಯವಾಗಿ ವರ್ತಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ರಾತ್ರಿ ಹೆಣ್ಣೂರು ರೈಲು ನಿಲ್ದಾಣದ ಬಳಿ ಈ ಘಟನೆ ನಡೆದಿದೆ ಎನ್ನಲಾಗಿದ್ದು, ಆರಂಭದಲ್ಲಿ ನಾಯಿಯ ಕೊರಳಿಗೆ ಚೈನ್ ಕಟ್ಟಿ ದ್ವಿಚಕ್ರ ವಾಹನದಲ್ಲಿ ತಂದಿದ್ದಾನೆ. ನಂತರ ನಾಯಿಯನ್ನು ರಸ್ತೆಯಲ್ಲಿ ಓಡಿಸಲು ಬಿಟ್ಟು ದ್ವಿಚಕ್ರ ವಾಹನವನ್ನು ಓಡಿಸಿ ಒಂದು ಕೈಯಲ್ಲಿ ನಾಯಿಯ ಸರಪಳಿ, ಇನ್ನೊಂದು ಕೈಯಲ್ಲಿ ಸವಾರಿ ಮಾಡಿ ಸಾರ್ವಜನಿಕರಿಗೆ ತೊಂದರೆ ನೀಡಿದ್ದಾನೆ. ಹೆಲ್ಮೆಟ್ ಧರಿಸದೇ ಸಂಚಾರ ನಿಯಮ ಉಲ್ಲಂಘಿಸಿದ್ದಾನೆ . ಸದ್ಯ ಈ ವಿಡಿಯೊ ಬೆಂಗಳೂರು ಪೊಲೀಸರ ಗಮನಕ್ಕೆ ಬಂದಿದ್ದು, ತನಿಖೆ ನಡೆಸುತ್ತಿದ್ದಾರೆ. ಆರೋಪಿ ವಿರುದ್ಧ ಕ್ರಮಕ್ಕೆ ಮುಂದಾಗಿದ್ದಾರೆ.

ತಾತ್ಕಾಲಿಕ ಹುದ್ದೆಗೆ ಅರ್ಜಿ ಆಹ್ವಾನ

ಬೆಂಗಳೂರು: ನೃಪತುಂಗ ವಿಶ್ವವಿದ್ಯಾಲಯದಲ್ಲಿ ಕಚೇರಿ ಸಹಾಯಕರ 4 ಹುದ್ದೆ, ಲೆಕ್ಕ ಸಹಾಯಕರ 1 ಹುದ್ದೆ ಮತ್ತು ಗ್ರಂಥಾಲಯ ಸಹಾಯಕರ 1 ಹುದ್ದೆಗಳಿಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಗಳನ್ನು ಆಹ್ವಾನಿಸಲಾಗಿದೆ. ಕಚೇರಿ ಸಹಾಯಕರ ಹುದ್ದೆಗೆ, ಯಾವುದೇ ಪದವೀಧರರಾಗಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಕನ್ನಡ ಮತ್ತು ಆಂಗ್ಲ ಬೆರಳಚ್ಚು ತಿಳಿದವರಾಗಿ ರಬೇಕು. ಕನಿಷ್ಠ ಎರಡು ವರ್ಷಗಳ ಸೇವಾನುಭವ ಹೊಂದಿರಬೇಕು. ಲೆಕ್ಕ ಸಹಾಯಕರ ಹುದ್ದೆಗೆ, ಬಿ.ಕಾಂ ಅಥವಾ ಎಂ.ಕಾಂ ಪದವೀಧರರಾಗಿರಬೇಕು. ಟ್ಯಾಲಿ, ಕನ್ನಡ ಮತ್ತು ಆಂಗ್ಲ ಬೆರಳಚ್ಚು ತಿಳಿದವರಾಗಿರಬೇಕು. ಕನಿಷ್ಠ ಎರಡು ವರ್ಷಗಳ ಸೇವಾನುಭವ ಹೊಂದಿರಬೇಕು. ಕನ್ನಡ ಮತ್ತು ಆಂಗ್ಲ ಬೆರಳಚ್ಚು ತಿಳಿದವರಾಗಿರಬೇಕು. ಕನಿಷ್ಠ ಎರಡು ವರ್ಷಗಳ ಸೇವಾನುಭವ ಹೊಂದಿರಬೇಕು ಎಂದು ತಿಳಿಸಿದೆ. ಅರ್ಜಿ ಸಲ್ಲಿಸಲು ಜ.7ರಂದು ಕೊನೆಯ ದಿನ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಹೊಸ ವರ್ಷಾಚರಣೆ: ಪೊಲೀಸ್ ಜತೆ ಪಾಲಿಕೆ

ಬೆಂಗಳೂರು; ನಗರದಲ್ಲಿ ಹೊಸ ವರ್ಷಾಚರಣೆಗೆ ಸಿದ್ಧತೆ ಭರದಿಂದ ಸಾಗಿದ್ದು, ಸಂಭ್ರಮಾಚರಣೆಗೆ ಯಾವುದೇ ಅಡ್ಡಿಯಾಗದಂತೆ ಕ್ರಮ ವಹಿಸಲು ಬಿಬಿಎಂಪಿ ಹಾಗೂ ಪೊಲೀಸ್ ಇಲಾಖೆ ಸಜ್ಜಾಗಿದೆ. ನಗರದಲ್ಲಿ ಹೊಸ ವರ್ಷಕ್ಕೆ ಸಕಲ ಸಿದ್ಧತೆಗಳು ನಡೆದಿದ್ದು, ಎಂ.ಜಿ ರೋಡ್, ಬ್ರಿಗೇಡ್ ರೋಡ್ ,ಚರ್ಚ್ ಸ್ಟ್ರೀಟ್ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಕ್ರಮವಹಿಸಲು ಪಾಲಿಕೆ ಹಾಗೂ ಪೊಲೀಸ್ ಇಲಾಖೆ ಮುಂದಾಗಿದೆ. ಪ್ರತಿವರ್ಷದಂತೆ ಈ ಬಾರೀ ಹೊಸ ವರ್ಷಕ್ಕೆ ಕಸದ ನಿರ್ವಹಣೆ, ಸಿಸಿಟಿವಿ ಕ್ಯಾಮೆರಾ ನಿರ್ವಹಣೆ ಸೇರಿದಂತೆ ಇನ್ನಿತರೆ ಕೆಲಸಗಳಲ್ಲಿ ಪೊಲೀಸ್ ಇಲಾಖೆ ಜತೆ ಕೈಜೋಡಿಸಲಿದ್ದು, ಹೆಚ್ಚು ಜನ ಸೇರುವ ಕಡೆ ಪ್ರಾಥಮಿಕ ಚಿಕಿತ್ಸೆಗೆ ಪಾಲಿಕೆ ವೈದ್ಯರನ್ನು ನೇಮಿಸಿ ಮೇಲ್ವಿಚಾರಣೆ ನಡೆಸಲು ಪಾಲಿಕೆ ಸಿದ್ಧತೆ ನಡೆಸಿದೆ. ಡಿ. 31ರ ರಾತ್ರಿ 11ಗಂಟೆಯಿಂದ ರಾತ್ರಿ 2ಗಂಟೆವರೆಗೂ, ಬಿಎಂಟಿಸಿ ಬಸ್‌ಗಳು ಸಂಚರಿಸಲಿದ್ದು, ಹೆಚ್ಚಿನ ಜನ ಸೇರುವ ಸಾಧ್ಯತೆಯರುವುದರಿಂದ ಡಿ.31ರ ರಾತ್ರಿ 11 ರಿಂದ 2ರವರೆಗೆ ಎಂ.ಜಿ.ರಸ್ತೆ ಮೆಟ್ರೋ ರೈಲು ನಿಲ್ದಾಣ ಬಂದ್ ಮಾಡಲಾಗುತ್ತಿದೆ. ಅಂದರೆ ಎಂ.ಜಿ.ರಸ್ತೆ ಮೆಟ್ರೋ ನಿಲ್ದಾಣದಲ್ಲಿ ಇಳಿಯಬಹುದು, ಹೊರತು ಹತ್ತಲು ಅವಕಾಶ ಇರುವುದಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಹೇಳಿದ್ದಾರೆ.

ಹೊಸ ವರ್ಷಕ್ಕೆ ನಿಯಮಗಳು: • ರಾತ್ರಿ 1ರಿಂದ 2 ಗಂಟೆಯೊಳಗೆ ಸೆಲೆಬ್ರೇಷನ್ ಮುಗಿಸಬೇಕು • ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಇಂದಿರಾನಗರದಲ್ಲಿ ಆಚರಣೆಗೆ ಅನುಮತಿ. • ಹೆಚ್ಚು ಜನ ಸೇರುವ ಕಡೆ 800 ಸಿಸಿಟಿವಿ ಕ್ಯಾಮರಾ ಅಳವಡಿಕೆ • ಮಹಿಳೆಯರ ಸುರಕ್ಷತೆಗಾಗಿ ಮಹಿಳಾ ಪೊಲೀಸರ ನಿಯೋಜನೆ • ಲೌಡ್ ಸ್ಪೀಕರ್, ಪಟಾಕಿ ಸಿಡಿಸುವುದಕ್ಕೆ ನಿರ್ಬಂಧ • ಅನುಮತಿ ಪಡೆದಿದ್ದರೆ ಮಾತ್ರ ಹೆಚ್ಚು ಜನ ಸೇರಿ ಆಚರಣೆಗೆ ಅವಕಾಶ • ಡ್ರಿಂಕ್ ಆ್ಯಂಡ್ ಡ್ರೈವ್, ವೀಲಿಂಗ್ ಮಾಡಿದರೆ ಕ್ರಮ • ಸಾರ್ವಜನಿಕ ಸ್ಥಳಗಳಲ್ಲಿ ಅನುಚಿತ ವರ್ತನೆಗೆ ಕ್ರಮ • ದೊಡ್ಡ ದೊಡ್ಡ ಸ್ಕ್ರೀನ್‌ಗಳ ಮೂಲಕ ಖಾಕಿಪಡೆ ನಿಗಾ • ರಾತ್ರಿ 2ಗಂಟೆವರೆಗೂ ಬಿಎಂಟಿಸಿ, ಮೆಟ್ರೋ ಸಂಚಾರ

ಮಾಜಿ ಸಂಸದ ಡಿ.ಕೆ.ಸುರೇಶ್ ಹೆಸರು ದುರ್ಬಳಕೆ ಪ್ರಕರಣ

ಐಶ್ವರ್ಯ ದಂಪತಿ ಜ.6ರ ತನಕ ಪೊಲೀಸ್ ಕಸ್ಟಡಿಗೆ

ಬೆಂಗಳೂರು: ವರಾಹಿ ಜ್ಯುವೆಲ್ಲರಿ ಅಂಗಡಿ ಮಾಲೀಕರಿಗೆ 14.660 ಕೆ.ಜಿ.ಚಿನ್ನಾಭರಣ ವಂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಐಶ್ವರ್ಯಾಗೌಡ ತಮ್ಮ ಹೆಸರನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ.

ತಮ್ಮ ಹೆಸರು ದುರುಪಯೋಗ ಮಾಡಿಕೊಂಡು ಹಲವರಿಂದ ಚಿನ್ನಾಭರಣ ಹಾಗೂ ಹಣ ವಂಚನೆ ಮಾಡುತ್ತಿದ್ದ ಐಶ್ವರ್ಯಾಗೌಡ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಡಿ.ಕೆ. ಸುರೇಶ್ ಅವರು ಪೊಲೀಸ್ ಆಯುಕ್ತರಿಗೆ ನೀಡಿರುವ ದೂರಿನ ಪತ್ರದಲ್ಲಿ ತಿಳಿಸಿದ್ದಾರೆ. ಚಿನ್ನದ ವ್ಯಾಪಾರಿ ವನಿತಾ ಐತಾಳ್ ಎಂಬುವರಿಂದ 8.43 ಕೋಟಿ ರು. ಮೌಲ್ಯದ ಚಿನ್ನ ಖರೀಸಿದಿ ವಂಚನೆ ಆರೋಪದ ಪ್ರಕರಣದಲ್ಲಿ ಆರೋಪಿಯಾಗಿರುವ ಐಶ್ವರ್ಯಗೌಡ ಮತ್ತು ಪತಿ ಹರೀಶ್ ಎಂಬುವರಿಗೆ ಜನವರಿ 6ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ. ನಗರದ 4ನೇ ಎಸಿಎಂಎಂ ನ್ಯಾಯಾಲಯ ಈ ಪ್ರಕರಣದ ವಿಚಾರಣೆ ನಡೆಸಿತ್ತು. ಪೊಲೀಸರು ಹೆಚ್ಚಿನ ವಿಚಾರಣೆ ನಡೆಸಲು ಆರೋಪಿತರನ್ನು ತಮ್ಮ ವಶಕ್ಕೆ ನೀಡುವಂತೆ ಕೋರಿದ್ದರು. ಈ ಹಿನ್ನಲೆಯಲ್ಲಿ ವಂಚಕಿ ಐಶ್ವರ್ಯಗೌಡ ಹಾಗೂ ಅವರ ಪತಿ ಜನವರಿ 6ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ. ವಂಚನೆ ಕುರಿತು ಡಿ.23 ರಂದು ನಗರದ ಚಂದ್ರಾ ಲೇಔಟ್ ಠಾಣೆಯಲ್ಲಿ ವನಿತಾ ಐತಾಳ್ ಪ್ರಕರಣ ದಾಖಲಿಸಿದ್ದರು. ಇಬ್ಬರು ಆರೋಪಿಗಳನ್ನು ಚಂದ್ರಾ ಲೇಔಟ್ ಪೊಲೀಸರು ಬಂಧಿಸಿ ಡಿ.28 ರಂದು ಕೋರ್ಟ್‌ಗೆ ಹಾಜರುಪಡಿಸಿದ್ದರು. ಸೋಮವಾರ ಇಬ್ಬರಿಗೆ ಜನವರಿ 6ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ. ಎ3 ಆರೋಪಿ ನಟ ಬಿ.ಧರ್ಮೇಂದ್ರ ನಾಪತ್ತೆಯಾಗಿದ್ದು, ಹುಡುಕಾಟ ನಡೆಸಿದ್ದಾರೆ.

ನಮೋಶಿಗೆ ನಿರೀಕ್ಷಣಾ ಜಾಮೀನು

ಬೆಂಗಳೂರು: ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧೀನದಲ್ಲಿರುವ ಕಲಬುರಗಿಯ ಮಹಾದೇವಪ್ಪ ರಾಂಪುರೆ ವೈದ್ಯಕೀಯ ಮಹಾವಿದ್ಯಾಲಯದ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಿಗೆ ನೀಡಬೇಕಾದ ವಿದ್ಯಾರ್ಥಿ ವೇತನ ದುರುಪಯೋಗ ಮಾಡಿಕೊಂಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಬಂಧನ ಭೀತಿಯಲ್ಲಿದ್ದ ವಿಧಾನಪರಿಷತ್ ಬಿಜೆಪಿ ಸದಸ್ಯ ಶಶೀಲ್ ನಮೋಶಿ ಅವರಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ವಂಚನೆ ಆರೋಪದಲ್ಲಿ ಕಲಬುರಗಿಯ ಸಿಇಎನ್ ಪೊಲೀಸರು ದಾಖಲಿಸಿದ್ದ ಪ್ರಕರಣ ಸಂಬಂಧ ಬಂಧನ ಭೀತಿಯಲ್ಲಿದ್ದ ಶಶೀಲ್ ನಮೋಶಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠ, ನಿರೀಕ್ಷಣಾ ಜಾಮೀನು ಮಂಜೂರು ಮಾಡಿ ಆದೇಶಿಸಿದೆ. ಅಲ್ಲದೆ, ಅರ್ಜಿದಾರರ ವಿರುದ್ಧ ದಾಖಲಾಗಿರುವ ಪ್ರಕರಣದಲ್ಲಿ 10 ವರ್ಷಗಳಿಗಿಂತ ಹೆಚ್ಚಿನ ಶಿಕ್ಷೆ ಮತ್ತು ಜೀವಾವಧಿ ಶಿಕ್ಷೆ ವಿಧಿಸುವಂತಹ ಆರೋಪಗಳಿಲ್ಲ. ಅವ್ಯವಹಾರ ನಡೆದಿರುವ ಮೊತ್ತ ಹೆಚ್ಚಾಗಿದ್ದರೂ, ಆರೋಪಿಗೆ ಕೇವಲ 7 ವರ್ಷಗಳು ಮಾತ್ರ ಶಿಕ್ಷೆ ನೀಡುವಂತಹದ್ದಾಗಿದೆ ಎಂದಿದೆ. ಅರ್ಜಿದಾರರು ಎರಡು ಲಕ್ಷ ವೈಯಕ್ತಿಕ ಬಾಂಡ್, ಅಷ್ಟೇ ಮೊತ್ತದ ಶ್ಯೂರಿಟಿ ನೀಡಬೇಕು. ತನಿಖಾಧಿಕಾರಿ ಕರೆದಾಗ ತನಿಖೆಗೆ ಹಾಜರಾಗಿ ಅಗತ್ಯವಿದ್ದಲ್ಲಿ ಸಂಬಂಧಿಸಿದ ದಾಖಲೆಗಳನ್ನು ಒದಗಿಸಬೇಕು. ಅನುಮತಿ ಇಲ್ಲದೆ ನ್ಯಾಯಾಲಯದ ವ್ಯಾಪ್ತಿಯಿಂದ ಹೊರಗಡೆ ಹೋಗಬಾರದು. ಈ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ನಿರೀಕ್ಷಣಾ ಜಾಮೀನು ರದ್ದಾಗಲಿದೆ ಎಂದು ಪೀಠ ಷರತ್ತು ವಿಧಿಸಿದೆ.

ನೈಋತ್ಯ ರೈಲ್ವೆ ಇಲಾಖೆಯಲ್ಲಿ ಮುಖ್ಯ ಟಿಕೆಟ್ ಇನ್‌ಸ್ಪೆಕ್ಟರ್ ಪೊಲೀಸ್ ಬಲೆಗೆ

ಪರೀಕ್ಷೆ ಪಾಸ್ ಮಾಡಿಸುವುದಾಗಿ ವಂಚನೆ: ರೈಲ್ವೆ ಅಧಿಕಾರಿ ಸೆರೆ

ಬೆಂಗಳೂರು: ಸರಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗಾಗಿ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಅಭ್ಯರ್ಥಿಗಳನ್ನು ಪಾಸ್ ಮಾಡಿಸುವುದಾಗಿ ನಂಬಿಸಿ ಲಕ್ಷಾಂತರ ರು.ಗಳ ವಂಚನೆ ನಡೆಸುತ್ತಿದ್ದ ರೈಲ್ವೆ ಚೀಫ್ ಟಿಕೆಟ್ ಇನ್‌ಸ್ಪೆಕ್ಟರ್‌ನನ್ನು ವಿಜಯನಗರ ಪೊಲೀಸರು ಬಂಧಿಸಿದ್ದಾರೆ.

ಮೆಜೆಸ್ಟಿಕ್‌ನಲ್ಲಿರುವ ನೈಋತ್ಯ ರೈಲ್ವೆಯಲ್ಲಿ ಚೀಫ್ ಟಿಕೆಟ್ ಇನ್‌ಸ್ಪೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿದ್ದ ಗೋವಿಂದ ರಾಜು(49) ಬಂಧಿತ ಆರೋಪಿಯಾಗಿದ್ದು, ಮಧ್ಯವರ್ತಿಗಳ ಸಹಾಯದಿಂದ ಇತ್ತೀಚೆಗೆ ನಡೆದ ಸ್ಪರ್ಧಾತ್ಮಕ ಪರೀಕ್ಷೆ ಬರೆದ ಕೆಲ ಅಭ್ಯರ್ಥಿಗಳನ್ನು ಆರೋಪಿಯು ಸಂಪರ್ಕಿಸಿದ್ದು, ತನಗೆ ಪರೀಕ್ಷೆಗೆ ಸಂಬಂಧಿಸಿದ ಕೆಲ ಅಧಿಕಾರಿಗಳ ಪರಿಚಯವಿದ್ದು, ಪರೀಕ್ಷೆಯಲ್ಲಿ ಪಾಸ್ ಮಾಡಿಸಿ ಹುದ್ದೆ ಕೊಡಿಸುವುದಾಗಿ ಅಭ್ಯರ್ಥಿಗಳನ್ನು ನಂಬಿಸಿದ್ದ. ಅಭ್ಯರ್ಥಿಗಳಿಂದ ಪಿಡಿಒ ಹುದ್ದೆಗೆ 25 ಲಕ್ಷ ಹಾಗೂ ಕೆಎಎಸ್ ಪ್ರಿಲಿಮ್ಸ್ ಪರೀಕ್ಷೆ ಪಾಸ್ ಮಾಡಿಸಲು 50 ಲಕ್ಷ ರು.ಗೆ ಮಾತನಾಡಿಕೊಂಡಿದ್ದ ಎಂದು ಆರೋಪಿಸಲಾಗಿದೆ.

ಆರೋಪಿಯ ಬಳಿ ನಾಲ್ಕು ಮೊಬೈಲ್‌ಗಳು ಪತ್ತೆಯಾಗಿದ್ದು, ಅವುಗಳಲ್ಲಿನ ಒಂದು ಮೊಬೈಲ್ ನಲ್ಲಿ 46 ಜನ ಅಭ್ಯರ್ಥಿಗಳ ಹೆಸರು ಮತ್ತು ಅದರ ಮುಂದೆ ಚೆಕ್ ಮತ್ತು ಡಾಕ್ಯುಮೆಂಟ್ ಎಂದು ನಮೂದಿಸಿರುವ ಫೋಟೋಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದು, ಆ ಅಭ್ಯರ್ಥಿಗಳು ಯಾರು ಎಂಬುದರ ಕುರಿತು ಕೂಲಂಕಷವಾದ ತನಿಖೆ ನಡೆಸಲಾಗುತ್ತಿದೆ. ಆರೋಪಿಯು ಅಭ್ಯರ್ಥಿಗಳಿಂದ ಪಡೆದ ಕೆಲವು ದಾಖಲೆ ಮತ್ತು ಚೆಕ್‌ಗಳನ್ನು ಮಧ್ಯವರ್ತಿಗಳಿಗೆ ನೀಡಿರುವುದಾಗಿ ಹೇಳಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಭ್ಯರ್ಥಿಗಳ ದಾಖಲೆ ಪಡೆದಿದ್ದ

ಪರೀಕ್ಷೆಯಲ್ಲಿ ಉತ್ತರ ಗೊತ್ತಿಲ್ಲದ ಪ್ರಶ್ನೆಗಳನ್ನು ಖಾಲಿ ಬಿಟ್ಟುಬರುವಂತೆ ತಿಳಿಸಿ, ನಂತರ ತಾನು ಸರಿಯಾದ ಉತ್ತರಗಳನ್ನು ತುಂಬಿಸಿ ಪಾಸ್ ಮಾಡಿಸುವುದಕ್ಕೆ ಗ್ಯಾರಂಟಿಯಾಗಿ ಅಭ್ಯರ್ಥಿ ಗಳ ಎಸ್‌ಎಸ್‌ಎಲ್‌ಸಿ ಮತ್ತು ಪದವಿ ಸರ್ಟಿಫಿಕೇಟ್, ಪರೀಕ್ಷಾ ಪ್ರವೇಶ ಪತ್ರಗಳು, ಚೆಕ್‌ಗಳನ್ನು ಪಡೆದುಕೊಂಡಿದ್ದ ಎಂದು ಹೇಳಲಾಗುತ್ತಿದೆ. ಭಾನು ವಾರ ನಡೆದ ಕೆಎಎಸ್ ಪರೀಕ್ಷೆಯಲ್ಲಿ ಪಾಸ್ ಮಾಡಿಸುವುದಾಗಿ ಅಭ್ಯರ್ಥಿ ಯೊಬ್ಬರ ಕಡೆಯವರನ್ನು ಭೇಟಿಯಾಗಲು ವಿಜಯನಗರಕ್ಕೆ ಬಂದಿದ್ದಾಗ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಬಿಎನ್‌ಎಸ್ ಕಾಯಿದೆಯ ಸೆಕ್ಷನ್ : 318 (4), 61 (1) (ಎ), ಮತ್ತು 3 (5) ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣ: ಇಂದು ವಿಚಾರಣೆ

ಬೆಂಗಳೂರು: ದೇಶದೆಲ್ಲೆಡೆ ತೀವ್ರ ಚರ್ಚೆಗೆ ಗ್ರಾಸವಾಗಿದ್ದ ಟೆಕ್ಕಿ ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಮೂವರು ಆರೋಪಿಗಳು ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಸಿಟಿ ಸಿವಿಲ್ ನ್ಯಾಯಾಲಯ ಮಂಗಳವಾರಕ್ಕೆ ಮುಂದೂಡಿದೆ.

ಮಾರತಹಳ್ಳಿ ಪೊಲೀಸರಿಂದ ಬಂಧಿತರಾಗಿದ್ದ ಅತುಲ್ ಪತ್ನಿ ನಿಖಿತಾ ಸಿಂಘಾನಿಯಾ, ಅತ್ತೆ ನಿಶಾ ಸಿಂಘಾನಿಯಾ ಹಾಗೂ ಬಾಮೈದ ಅನುರಾಗ್ ಸಿಂಘಾನಿಯ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯವು ವಿಚಾರಣೆ ನಡೆಸಿತು. ಆರೋಪಿಗಳ ಪರ ವಕೀಲರು ವಾದ ಮಂಡಿಸಿ, ಆರೋಪಿಗಳಿಗೆ ಜಾಮೀನು ಮಾನ್ಯ ಮಾಡಬೇಕೆಂದು ಮನವಿ ಮಾಡಿದರು. ಇದಕ್ಕೆ ಆಕ್ಷೇಪಿಸಿದ ಸರಕಾರ ಪರ ಅಭಿಯೋಜಕರಾದ ಭಾಗಲಕ್ಷ್ಮೀ ಅವರು ಆರೋಪಿತರಿಗೆ ಜಾಮೀನು ನೀಡಬಾರದೆಂದು ತಕರಾರು ಅರ್ಜಿ ಸಲ್ಲಿಸಿ ನಾಳೆ ವಾದ ಮಂಡಿಸುವುದಾಗಿ ತಿಳಿಸಿದರು. ವಾದ- ಪ್ರತಿವಾದ ಆಲಿಸಿದ ನ್ಯಾಯಾಲಯವು ಮಂಗಳವಾರಕ್ಕೆ ವಿಚಾರಣೆ ಮುಂದೂಡಿತು.

ಪತ್ನಿ ಹಾಗೂ ಮನೆಯವರು ಕಿರುಕುಳ ನೀಡುತ್ತಿರುವುದಾಗಿ ಆರೋಪಿಸಿ ಸುದೀರ್ಘ ಡೆತ್ ನೋಟ್ ಬರೆದು ಡಿ.9ರಂದು ಮಾರತಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಮುನೆಕೊಳಲಿನಲ್ಲಿದ್ದ ಮನೆಯಲ್ಲಿ ಅತುಲ್ ಸುಭಾಷ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಸಾವಿಗೂ ಮುನ್ನ ಮೊಬೈಲ್‌ನಲ್ಲಿ ಮಾಡಿಕೊಂಡಿದ್ದ ವಿಡಿಯೊ ವೈರಲ್ ಆಗುತ್ತಿದ್ದಂತೆ ರಾಷ್ಟ್ರದೆಲ್ಲೆಡೆ ಚರ್ಚೆಗೆ ಕಾರಣವಾಗಿತ್ತು. ಈ ಸಂಬಂಧ ಭಾರತೀಯ ನ್ಯಾಯ ಸಂಹಿತೆ 108ರ ಆತ್ಮಹತ್ಯೆಗೆ ಪ್ರಚೋದನೆಯಡಿ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು, ಡಿ.20ರಂದು ನಿಖಿತಾಳನ್ನು ಹರಿಯಾಣದ ಗುರುಗ್ರಾಮ ಹಾಗೂ ತಾಯಿ ಹಾಗೂ ಸಹೋದರರನ್ನು ಉತ್ತರಪ್ರದೇಶದ ಪ್ರಯಾಗ್‌ರಾಜ್‌ನ ಹೋಟೆಲ್‌ವೊಂದರಲ್ಲಿ ಬಂಧಿಸಿದ್ದರು. ಸದ್ಯ ಮೂವರು ಆರೋಪಿಗಳು ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ.

ಪಿಯರ್ ಸಿಲ್ವನ್‌ಫಿಲಿಯೋಜಾ ನಿಧನಕ್ಕೆ ಜೋಶಿ ಸಂತಾಪ

ಬೆಂಗಳೂರು: ಫ್ರಾನ್ಸ್‌ನಲ್ಲಿ ಕನ್ನಡದ ಕೀರ್ತಿಯನ್ನು ಎತ್ತಿ ಹಿಡಿದಿದ್ದ ಸಂಸ್ಕೃತ ಮತ್ತು ಕನ್ನಡ ವಿದ್ವಾಂಸ ಪಿಯರ್ ಸಿಲ್ವಿನ್ ಫಿಲಿಯೋಜಾ (89) ನಿಧನಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಸಂಸ್ಕೃತದಲ್ಲಿ ಅಪಾರ ಪಾಂಡಿತ್ಯವನ್ನು ಪಡೆದಿದ್ದ ಅವರು ಕನ್ನಡ ನಾಡು ಮತ್ತು ಕನ್ನಡ ಭಾಷೆಯ ಮೇಲೆ ಅಪಾರ ಪ್ರೀತಿಯನ್ನು ಹೊಂದಿದ್ದರು, ತಮ್ಮ ಜೀವನದ ಬಹುಕಾಲವನ್ನು ಕನ್ನಡ ನಾಡಿನಲ್ಲಿಯೇ ಕಳೆದಿದ್ದರು. ಮಂಡ್ಯದಲ್ಲಿ ಇತ್ತೀಚೆಗೆ ನಡೆದ 87ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ಸನ್ಮಾನಿಸಲು ತೀರ್ಮಾನಿಸಲಾಗಿತ್ತು. ಅದಕ್ಕಾಗಿ ಅವರನ್ನು ವೈಯಕ್ತಿಕವಾಗಿ ಕೂಡ ಆಹ್ವಾನಿಸಿದ್ದೆ. ಅನಾರೋಗ್ಯದ ಕಾರಣದಿಂದ ಅವರು ಭಾಗವಹಿಸಲು ಆಗಲಿಲ್ಲ. ಅವರ ಕೊಡುಗೆಗಳನ್ನು ಕನ್ನಡ ಸಾಹಿತ್ಯ ಪರಿಷತ್ತು ಯಾವತ್ತೂ ಸ್ಮರಿಸುತ್ತದೆ ಎಂದು ಹೇಳಿದರು. ವಯೋಸಹಜ ಕಾರಣಗಳಿಂದ ಪ್ಯಾರೀಸಿನಲ್ಲಿ

ನಿಧನರಾದ ಪಿಯರ್ ಸಿಲ್ವಿನ್ ಫಿಲಿಯೋಜಾ ಅವರಿಗೆ ಭಾರತ ಸರಕಾರವು ಪದ್ಮಶ್ರೀ ಪುರಸ್ಕಾರ ನೀಡಿ ಗೌರವಿಸಿತ್ತು. ವಿದೇಶಿಯರಾದರೂ ನಮ್ಮ ಸಂಸ್ಕೃತಿಗೆ ಅವರು ನೀಡಿದ ಕೊಡುಗೆಗಳನ್ನು ಸೂಕ್ತವಾಗಿ ಸ್ಮರಿಸುವ ಮತ್ತು ಅವರ ಸಂಶೋಧನೆಗಳನ್ನು ಮುಂದುವರಿಸುವ ಪ್ರಯತ್ನವನ್ನು ಕನ್ನಡ ಸಾಹಿತ್ಯ ಪರಿಷತ್ತು ಮಾಡಲಿದೆ. ಅವರ ಮಡದಿ, ಇಬ್ಬರು ಪುತ್ರಿಯರು ಸೇರಿದಂತೆ ದು:ಖತಪ್ತ ಕುಟುಂಬದ ನೋವಿನಲ್ಲಿ ನಾವೆಲ್ಲರೂ ಭಾಗಿಗಳು ಎಂದು ಸಂತಾಪ ಸೂಚಿಸಿದರು.

ಕೆಂಪೇಗೌಡ ವಿಮಾನ ನಿಲ್ದಾಣ ಸಮೀಪವೇ ಟರ್ಮಿನಲ್ ನಿರ್ಮಾಣ

ಬೆಂಗಳೂರಲ್ಲಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕೇಂದ್ರ ಸರಕಾರದ ಘೋಷಣೆಯ ಹಿನ್ನೆಲೆ ಕರ್ನಾಟಕದ ಬೆಂಗಳೂರಿನಲ್ಲಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್ ನಿರ್ಮಾಣವಾಗಲಿದ್ದು, ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ಈ ಟರ್ಮಿನಲ್‌ಗಾಗಿ ಸ್ಥಳ ಗುರುತಿಸಲಾಗಿದೆ.

ಬೆಂಗಳೂರಿನ ಹೊರವಲಯದಲ್ಲಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್ ನಿರ್ಮಾಣವಾಗಲಿದ್ದು, ರೈಲ್ವೆ ಇಲಾಖೆ ಅಧಿಕಾರಿಗಳು ಈ ಕುರಿತು ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲು ಸಿದ್ಧತೆ ನಡೆಸಿದ್ದಾರೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪವೇ ಈ ಟರ್ಮಿನಲ್ ನಿರ್ಮಾಣವಾಗಲಿದೆ ಎಂದು ಹೇಳಲಾಗುತ್ತಿದ್ದು, ಹೆಚ್ಚಳವಾಗುತ್ತಿರುವ ಪ್ರಯಾಣಿಕರ ಸಂಖ್ಯೆ, ರೈಲುಗಳ ನಿರ್ವಹಣೆಯನ್ನು ಗಮನದಲ್ಲಿಟ್ಟುಕೊಂಡು ದೇಶಾದ್ಯಂತ ರೈಲ್ವೆ ಕೋಚಿಂಗ್ ಟರ್ಮಿನಲ್ ನಿರ್ಮಾಣ ಮಾಡಲಾಗುತ್ತದೆ. ರೈಲ್ವೆ ವಲಯಗಳೇ ಈ ಟರ್ಮಿನಲ್ ನಿರ್ಮಾಣದ ಸಂಪೂರ್ಣ ಜವಾಬ್ದಾರಿಯನ್ನು ತೆಗೆದುಕೊಳ್ಳಲಿದೆ. ಕೆಎಸ್‌ಆರ್ ಬೆಂಗಳೂರು ನಿಲ್ದಾಣದಲ್ಲಿರುವ ಟರ್ಮಿನಲ್ ಮೇಲೆ ನಿರ್ವಹಣೆ ಒತ್ತಡ ಹೆಚ್ಚಿದ್ದು, ಬೆಂಗಳೂರು ನಗರಕ್ಕೆ ಹೊಸ ಟರ್ಮಿನಲ್ ಅತ್ಯಗತ್ಯವಾಗಿದೆ ಎನ್ನುವ ಮಾತುಗಳು ಕೇಳಿ ಬಂದಿದೆ.

ಯಲಹಂಕ- ಚಿಕ್ಕಬಳ್ಳಾಪುರ ನಡುವೆ ಟರ್ಮಿನಲ್

ಯಲಹಂಕ, ದೇವನಹಳ್ಳಿ ಮತ್ತು ಚಿಕ್ಕಬಳ್ಳಾಪುರ ರೈಲ್ವೆ ನಿಲ್ದಾಣದ ನಡುವೆ ಈ ರೈಲ್ವೆ ಕೋಚಿಂಗ್ ಟರ್ಮಿನಲ್ ನಿರ್ಮಾಣವಾಗಲಿದ್ದು, ಈ ಪ್ರದೇಶದಲ್ಲಿ ಈಗಾಗಲೇ ನೈಋತ್ಯ ರೈಲ್ವೆಗೆ ಸೇರಿದ ಭೂಮಿ ಲಭ್ಯವಿದೆ. ಆದ್ದರಿಂದ ಇಲ್ಲಿಯೇ ಟರ್ಮಿನಲ್ ನಿರ್ಮಾಣ ಮಾಡಲು ಕಾರ್ಯ ಸಾಧ್ಯತಾ ವರದಿಯನ್ನು ತಯಾರು ಮಾಡಲಾಗುತ್ತದೆ. ಈ ಟರ್ಮಿನಲ್ 16 ಪ್ಲಾಟ್‌ಫಾರಂ, 20 ಸ್ಟ್ಯಾಬಿಂಗ್ ಲೈನ್, 10 ಪಿಟ್‌ಲೈನ್ , 2 ರನ್ ಥ್ರೂ ಲೈನ್, 2 ಬೋಗಿ ನಿರ್ವಹಣಾ ಶೆಡ್ ಒಳಗೊಂಡಿರಲಿದೆ. ಅಲ್ಲದೇ ಎಲ್ಲಾ ವಿಭಾಗಕ್ಕೂ ನಿರ್ವಹಣಾ ಕಚೇರಿ, ವಾಹನದ ಪಾರ್ಕಿಂಗ್ ಸ್ಥಳವನ್ನು ನಿರ್ಮಿಸಲಾಗುತ್ತದೆ. ಈ ಯೋಜನೆಗೆ ಸುಮಾರು 1000 ಎಕರೆ ಭೂಮಿ ಬೇಕು ಎಂದು ಅಂದಾಜಿಸಲಾಗಿದೆ.

107 ಎಕರೆ ಪ್ರದೇಶ ವಿಸ್ತೀರ್ಣ

ಕೆಎಸ್‌ಆರ್ ಬೆಂಗಳೂರು ರಾಜ್ಯದಲ್ಲಿ ಅತಿದೊಡ್ಡ ರೈಲು ಲ್ದಾಣವಾಗಿದ್ದು, 10 ಪ್ಲಾಟ್‌ಫಾರಂ, 6 ಸ್ಟ್ಯಾಬಿಂಗ್ ಲೈನ್, 5 ಪಿಟ್ ಲೈನ್‌ಗಳನ್ನು ಈ ನಿಲ್ದಾಣ ಹೊಂದಿದೆ. ನಿಲ್ದಾಣ, ನಿರ್ವಹಣಾ ಶೆಡ್ ಸೇರಿ ಸುಮಾರು 107 ಎಕರೆ ಪ್ರದೇಶವನ್ನು ಇದು ಒಳಗೊಂಡಿದೆ. ಸ್ಟ್ಯಾಬಿಂಗ್ ಲೈನ್‌ಗಳಲ್ಲಿ ನಿರ್ವಹಣೆಯಾದ ರೈಲುಗಳನ್ನು ನಿಲ್ಲಿಸಲಾಗುತ್ತದೆ. ಪಿಟ್‌ಲೈನ್‌ನಲ್ಲಿ ರೈಲಿನ ನಿರ್ವಹಣೆ, ಸ್ವಚ್ಛತೆಯನ್ನು ಮಾಡಲಾಗುತ್ತದೆ. ಸ್ಥಳ ಗುರುತಿಸಿರುವ ರೈಲ್ವೆ ಕೋಚಿಂಗ್ ಟರ್ಮಿನಲ್ ಬೆಂಗಳೂರು-ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿಗೆ ಹತ್ತಿರವಾಗಿದೆ. ಅಲ್ಲದೇ ಬೆಂಗಳೂರಿನ ಉಪನಗರ ವರ್ತುಲ ರಸ್ತೆ ಯೋಜನೆ (ಎಸ್‌ಟಿಆರ್‌ಆರ್)ನಿಂದ 7 ಕಿ. ಮೀ. ದೂರದಲ್ಲಿದೆ. ಕೆಐಎ ವಿಮಾನ ನಿಲ್ದಾಣಕ್ಕೆ 15 ಕಿ. ಮೀ. ದೂರದಲ್ಲಿದೆ. ಸುಮಾರು 1,500 ಕೋಟಿ ರು.ಗಳ ಯೋಜನೆಯಾಗಿದೆ. ಕೆಎಸ್‌ಆರ್ ಬೆಂಗಳೂರು, ಯಶವಂತಪುರ ನಿಲ್ದಾಣಗಳ ಮೇಲೆ ಸದ್ಯ ಇರುವ ಒತ್ತಡ ಕಡಿಮೆ ಮಾಡಲು ಈ ಟರ್ಮಿನಲ್ ಸಹಾಯಕವಾಗಲಿದೆ.

2025ನೇ ಸಾಲಿನಲ್ಲಿ 19 ಸರಕಾರಿ ರಜೆ

ಬೆಂಗಳೂರು: ಹೊಸ ವರ್ಷದ ಆಗಮನಕ್ಕೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೇ 2025ನೇ ಸಾಲಿನ ಸಾರ್ವತ್ರಿಕ ರಜಾ ದಿನಗಳ ಪಟ್ಟಿಯನ್ನು ಸರಕಾರ ಪ್ರಕಟಿಸಿದೆ. ಪ್ರತಿ ತಿಂಗಳ ಎರಡನೇ ಶನಿವಾರ, ನಾಲ್ಕನೇ ಶನಿವಾರ ಮತ್ತು ಭಾನುವಾರ ರಜಾದಿನಗಳಾಗಿದ್ದು ಅವುಗಳನ್ನು ಹೊರತುಪಡಿಸಿ ಸಾರ್ವತ್ರಿಕ ರಜಾದಿನಗಳ ಪಟ್ಟಿಯಿದ್ದು 2025ರಲ್ಲಿ 19 ದಿನ ರಜೆಯ ಸೌಲಭ್ಯವಿದೆ. ಸಾರ್ವತ್ರಿಕ ರಜಾದಿನವಾಗಿರುವ ಗಣರಾಜ್ಯೋತ್ಸವ (26.01.2025), ಯುಗಾದಿ ಹಬ್ಬ (30-03-2025), ಮೊಹರಂ ಕಡೆ ದಿನ (06-07-2025), ಮಹಾಲಯ ಅಮವಾಸ್ಯೆ (21-09-2025) ಭಾನುವಾರ ದಂದು ಬಂದಿದ್ದರೆ, ಕನಕದಾಸ ಜಯಂತಿ ಎರಡನೇ ಶನಿವಾರ ಬಂದಿರುವುದರಿಂದ ಸರ್ಕಾರಿ ನೌಕರರ ರಜೆಯಲ್ಲಿ 5 ದಿನಗಳ ಖೋತಾ ಆಗಿದೆ.

ರಜಾದಿನಗಳ ಪಟ್ಟಿ

- **14-01-2025 ಮಂಗಳವಾರ- ಸಂಕ್ರಾಂತಿ**
- **26-2-2025 ಬುಧವಾರ-ಮಹಾಶಿವರಾತ್ರಿ**
- **31-03-2025 ಸೋಮವಾರ- ರಂಜಾನ್**
- **10-04-2025 ಗುರುವಾರ-ಮಹಾವೀರ ಜಯಂತಿ**
- **14-04-2025 ಸೋಮವಾರ- ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ**
- **18-04-2025 ಶುಕ್ರವಾರ-ಗುಡ್‌ಫ್ರೈಡೆ**
- **30-04-2025 ಬುಧವಾರ-ಬಸವ ಜಯಂತಿ, ಅಕ್ಷರ ತೃತೀಯ**
- **01-05-2025 ಗುರುವಾರ-ಕಾರ್ಮಿಕ ದಿನಾಚರಣೆ**
- **07-06-2025 ಶನಿವಾರ-ಬಕ್ರೀದ್**
- **15-08-2025 ಶುಕ್ರವಾರ-ಸ್ವಾತಂತ್ರ್ಯ ದಿನಾಚರಣೆ**
- **27-08-2025 ಬುಧವಾರ- ಗಣೇಶ ಚತುರ್ಥಿ**
- **05-09-2025 ಶುಕ್ರವಾರ-ಈದ್ ಮಿಲಾದ್**
- **01-10-2025 ಬುಧವಾರ-ಮಹಾನವಮಿ, ಆಯುಧಪೂಜೆ**
- **02-10-2025 ಗುರುವಾರ-ಗಾಂಧಿ ಜಯಂತಿ**
- **07-10-2025 ಮಂಗಳವಾರ-ಮಹರ್ಷಿ ವಾಲ್ಮೀಕಿ ಜಯಂತಿ**
- **20-10-2025 ಸೋಮವಾರ-ನರಕ ಚತುರ್ದಶಿ**
- **22-10-2025 ಬುಧವಾರ-ಬಲಿಪಾಡ್ಯಮಿ, ದೀಪಾವಳಿ**
- **01-11-2025 ಶನಿವಾರ-ಕನ್ನಡ ರಾಜ್ಯೋತ್ಸವ**
- **25-12-2025 ಕ್ರಿಸ್‌ಮಸ್**

ಡೆತ್‌ನೋಟ್ ಬರೆದಿಟ್ಟು ಅಧಿಕಾರಿ ಆತ್ಮಹತ್ಯೆ

ಬೆಂಗಳೂರು: ಕರ್ನಾಟಕ ಸಾಬೂನು ಹಾಗೂ ಮಾರ್ಜಕ ನಿಯಮಿತ (ಕೆಎಸ್‌ಡಿಎಲ್) ಖರೀದಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿ ತಮ್ಮ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣ ಬೆಂಗಳೂರಿನಲ್ಲಿ ತಡವಾಗಿ ಬೆಳಕಿಗೆ ಬಂದಿದೆ.

ಅಮೃತ್ ಶಿರೂರು (40) ಆತ್ಮಹತ್ಯೆಗೆ ಶರಣಾದವರು. ಕೆಎಸ್‌ಡಿಎಲ್‌ನ ಖರೀದಿ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಅಮೃತ್ ಅವರು, ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯ ಮುನೇಶ್ವರ ನಗರದಲ್ಲಿ ವಾಸವಾಗಿದ್ದರು. ಡಿ.28ರ ಸಂಜೆ 5 ಗಂಟೆ ಸುಮಾರಿಗೆ ತಮ್ಮ ಮನೆಯ ನೆಲಮಹಡಿಯ ಫ್ಯಾನ್‌ಗೆ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಘಟನೆ ಸಂಬಂಧ ಬಾಡಿಗೆ ಮನೆ ಮಾಲೀಕ ಗಿರೀಶ್ ಎಂಬುವರು ನೀಡಿದ ದೂರಿನ ಮೇರೆಗೆ ಪೊಲೀಸರು ಪರಿಶೀಲನೆ ನಡೆಸಿ ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

'ನನ್ನ ಸಾವಿಗೆ ನಾನೇ ಕಾರಣ': ಶಿವಮೊಗ್ಗದ ಶಿರಾಳಕೊಪ್ಪ ಮೂಲದ ಅಮೃತ್, 2014 ರಿಂದ ಕೆಎಸ್‌ಡಿಎಲ್‌ನಲ್ಲಿ ಕೆಲಸ ಮಾಡುತ್ತಿದ್ದರು. ಮೊದಲ ವಿವಾಹವು ಪ್ರೇಮವಿವಾಹವಾಗಿ ಕೆಲವೇ ತಿಂಗಳಲ್ಲಿ ಪತ್ನಿಯಿಂದ ವಿಚ್ಛೇದನ ಪಡೆದಿದ್ದರು. 2019ರಲ್ಲಿ ಮತ್ತೊಂದು ಮದುವೆಯಾಗಿ ಪತಿ-ಪತ್ನಿ ಇಬ್ಬರೂ ದೂರಾಗಿದ್ದರು. ನ್ಯಾಯಾಲಯದಲ್ಲಿ ದಂಪತಿಯ ವಿಚ್ಛೇದನ ಅರ್ಜಿ ವಿಚಾರಣೆ ನಡೆಯುತ್ತಿದೆ. ಮುನೇಶ್ವರ ಬ್ಲಾಕ್ ಅಪಾರ್ಟ್‌ಮೆಂಟ್‌ವೊಂದರಲ್ಲಿ ಬಾಡಿಗೆ ಮನೆಯಲ್ಲಿ ಏಕಾಂಗಿಯಾಗಿ ವಾಸವಾಗಿದ್ದರು. ಕೌಟುಂಬಿಕ ಕಾರಣಕ್ಕಾಗಿ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಕೌಟುಂಬಿಕ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ. ನನ್ನ ಸಾವಿಗೆ ನಾನೇ ಕಾರಣ ಹೊರತು ಬೇರೆ ಯಾರೂ ಅಲ್ಲ ಎಂದು ಡೆತ್ ನೋಟ್‌ನಲ್ಲಿ ಅಮೃತ್ ಬರೆದಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಮಾನ್ಯ ಗೌರವಾನ್ವಿತ 2ನೇ ಅಪರ ಸಿವಿಲ್ ನ್ಯಾಯಾಧೀಶರ (ಕಿರಿಯ ಶ್ರೇಣಿ ವಿಭಾಗ) ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 650/2024
ಅರ್ಜಿದಾರರು: ಪುಟ್ಟಸ್ವಾಮಿ ಬಿನ್ ಲೇಟ್ ಮರೀಗೌಡ ವಯಸ್ಸು 61 ವರ್ಷ ವಾಸ: ಮಲ್ಲಪ್ಪನಹೊಸಹಳ್ಳಿಗ್ರಾಮ, ಕಸಬಾ ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.
ವಿರುದ್ಧ
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ಕನಕಪುರ ತಹಶೀಲ್ದಾರ್ ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇನ್ನೊಬ್ಬರು.
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ರಿಂದ 3ನೇ ಅರ್ಜಿದಾರರ ತಾಯಿ, 4 ಮತ್ತು 5ನೇ ಅರ್ಜಿದಾರರ ಅತ್ತೆ, 6 ಮತ್ತು 7ನೇ ಅರ್ಜಿದಾರರ ಅಜ್ಜಿಯವರಾದ ಶ್ರೀಮತಿ ಚನ್ನಮ್ಮ ಕೋಂ ಲೇಟ್ ಮರೀಗೌಡ ರವರು, ದಿನಾಂಕ 07.11.2018 ರಂದು ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಕಸಬಾ ಹೋಬಳಿ, ಮಲ್ಲಪ್ಪನಹೊಸಹಳ್ಳಿ ಗ್ರಾಮದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 10/02/2025 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಗೊಳಿಸಲಾಗುವುದು.
ದಿನಾಂಕ 30ನೇ ಸಿಸಂಬರ್ 2024ರಂದು ನನ್ನ ಸ್ವಹಸ್ತಾಕ್ಷರ ಮತ್ತು ನ್ಯಾಯಾಲಯದ ಮೊಹರಿನಿಂದ ನೀಡಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
2ನೇ ಅಪರ ಸಿವಿಲ್ ನ್ಯಾಯಾಧೀಶರುಮತ್ತು ಕನಕಪುರ ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ಹೆಚ್.ಎಸ್.ಮುರಳಿ
ವಕೀಲರು
ಸ್ಥಳ : ಕನಕಪುರ
ದಿನಾಂಕ:

ಮಾನ್ಯ ಗೌರವಾನ್ವಿತ 2ನೇ ಅಪರ ಸಿವಿಲ್ ನ್ಯಾಯಾಧೀಶರ (ಕಿರಿಯ ಶ್ರೇಣಿ ವಿಭಾಗ) ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 649/2024
ಅರ್ಜಿದಾರರು: ಪುಟ್ಟಸ್ವಾಮಿ ಬಿನ್ ಲೇಟ್ ಮರೀಗೌಡ ವಯಸ್ಸು 61 ವರ್ಷ ವಾಸ: ಮಲ್ಲಪ್ಪನಹೊಸಹಳ್ಳಿಗ್ರಾಮ, ಕಸಬಾ ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.
ವಿರುದ್ಧ
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ಕನಕಪುರ ತಹಶೀಲ್ದಾರ್ ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇನ್ನೊಬ್ಬರು.
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 2ನೇ ಅರ್ಜಿದಾರರ ತಮ್ಮ, 3ನೇ ಅರ್ಜಿದಾರರ ಅಣ್ಣ, 4ನೇ ಅರ್ಜಿದಾರರ ಮೈದುನ, 5ನೇ ಅರ್ಜಿದಾರರ ಗಂಡ, 6 ಮತ್ತು 7ನೇ ಅರ್ಜಿದಾರರ ಚಿಕ್ಕಪ್ಪನವರಾದ ನಾಗರಾಜು ಬಿನ್ ಲೇಟ್ ಮರೀಗೌಡ ರವರು, ದಿನಾಂಕ 09.10.2011 ರಂದು ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಕಸಬಾ ಹೋಬಳಿ, ಮಲ್ಲಪ್ಪನಹೊಸಹಳ್ಳಿ ಗ್ರಾಮದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 10/02/2025 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಗೊಳಿಸಲಾಗುವುದು.
ದಿನಾಂಕ 30ನೇ ಸಿಸಂಬರ್ 2024ರಂದು ನನ್ನ ಸ್ವಹಸ್ತಾಕ್ಷರ ಮತ್ತು ನ್ಯಾಯಾಲಯದ ಮೊಹರಿನಿಂದ ನೀಡಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
2ನೇ ಅಪರ ಸಿವಿಲ್ ನ್ಯಾಯಾಧೀಶರುಮತ್ತು ಕನಕಪುರ ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ಹೆಚ್.ಎಸ್.ಮುರಳಿ
ವಕೀಲರು
ಸ್ಥಳ : ಕನಕಪುರ
ದಿನಾಂಕ:

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಕನಕಪುರ
ಸಿ.ಮಿಸ್.ನಂ.223/2023
ಅರ್ಜಿದಾರರು: ಶ್ರೀ ಚೂಡೇಗೌಡ ಬಿನ್ ಲೇಟ್ ಚೂಡೇಗೌಡ ವಯಸ್ಸು 73 ವರ್ಷ ವಾಸ: ಕೊಳಾಲಗುಂದಿ ಗ್ರಾಮ ಮರಳವಾಡಿ ಹೋಬಳಿ ಕನಕಪುರ ತಾಲ್ಲೂಕು (ಹಾಲಿ ಹಾರೋಹಳ್ಳಿ ತಾಲ್ಲೂಕು) ರಾಮನಗರ ಜಿಲ್ಲೆ. ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಕನಕಪುರ ತಾಲ್ಲೂಕು. ರಾಮನಗರ ಜಿಲ್ಲೆ. 2. ಗ್ರಾಮ ಲೆಕ್ಕಾಧಿಕಾರಿಗಳು, ಕಲ್ಲನಕುಪ್ಪೆ ವೃತ್ತ, ಮರಳವಾಡಿ ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ರಿಂದ 4ನೇ ಅರ್ಜಿದಾರರ ತಾಯಿ,ಯವರಾದ ಶ್ರೀಮತಿ ಕೆಂಪಮ್ಮ ಕೋಂ ಲೇಟ್ ಚೂಡೇಗೌಡ ರವರು, ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು (ಹಾಲಿ ಹಾರೋಹಳ್ಳಿ ತಾಲ್ಲೂಕು), ಮರಳವಾಡಿ ಹೋಬಳಿ, ಕಲ್ಲನಕುಪ್ಪೆ ಗ್ರಾಮದಲ್ಲಿ ದಿನಾಂಕ 10.12.2017 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 04/02/2025 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.
2024ರ ಡಿಸಂಬರ್ 17ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ಸಿದ್ದಾರ್ಥ
ವಕೀಲರು, ಕನಕಪುರ ಟೌನ್
ಸ್ಥಳ : ಕನಕಪುರ
ದಿನಾಂಕ: 12/12/2024

ಸಾರ್ವಜನಿಕ ಪ್ರಕಟಣೆ
ನನ್ನ ಕಕ್ಷಿದಾರರಾದ ಶ್ರೀಮತಿ ಮಾಧವಿ ಹೆಚ್.ಜಿ. ರವರ ತಮ್ಮ ಮಾಲಿಕತ್ವಕ್ಕೊಳಪಟ್ಟ ಈ ಹಿಂದೆ ಶ್ರೀ ಕೆ.ವಾಸುದೇವ ಮೂರ್ತಿಯವರು ಹಿಂದಿನ ಮಾಲಿಕರಾದ ಶ್ರೀ ಪ್ರವೀಣ್ ಕುಮಾರ್ ಎ.ಎಮ್. ರವರಿಗೆ ಬರೆದುಕೊಟ್ಟು ಬೆಂಗಳೂರು ಲಗ್ಗೆರೆ ಉಪನೋಂದಣಾಧಿಕಾರಿಯರ ಕಛೇರಿಯಲ್ಲಿ ದಸ್ತಾವೇಜು ಸಂಖ್ಯೆ ಎಲ್‌ಎಜಿ-1-04472/2013-14 ಆಗಿ ನೋಂದಣಿಯಾಗಿ ಸಿ.ಡಿ.ಸಂಖ್ಯೆ ಎಲ್‌ಎಜಿಡಿ221 ರಲ್ಲಿ ಶೇಖರಣೆಯಾದ 12-12-2013 ನೇ ದಿನಾಂಕದ ಮೂಲ ಕ್ರಯಪತ್ರವು ಕಳೆದುಹೋಗಿರುತ್ತದೆ.
ಸದರಿ ಮೂಲ ಕ್ರಯಪತ್ರವು ಯಾರಿಗಾದರು ಸಿಕ್ಕಿದ್ದು, ಈ ಕೆಳಕಂಡವರಿಗೆ ಮಾಹಿತಿ ನೀಡಿದ್ದಲ್ಲಿ ಅಥವಾ ಹಿಂದಿರುಗಿಸಿದ್ದಲ್ಲಿ ಸೂಕ್ತ ಬಹುಮಾನ ಕೊಡಲಾಗುವುದು. ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಯಾವುದೇ ತೆರನಾದ ಹಕ್ಕಿದ್ದಲ್ಲಿ ಸೂಕ್ತ ಪುರಾವೆಯೊಂದಿಗೆ ಲಿಖಿತ ರೂಪದಲ್ಲಿ ಈ ಕೆಳಕಂಡವರಿಗೆ ತಕ್ಷಣ ಸಲ್ಲಿಸುವುದು.
ಸಹಿ/-
ಮೋಹನದಾಸ ಎನ್., ನ್ಯಾಯವಾದಿ,
3944/ಎ, ಎರಡನೇ ಅಡ್ಡರಸ್ತೆ, ಬಿ ಬ್ಲಾಕ್, ರಾಜಾಜಿನಗರ 2ನೇ ಹಂತ, ಸುಬ್ರಹ್ಮಣ್ಯನಗರ, ಬೆಂಗಳೂರು-560021.
ಸಂ.ದೂ: 9448129391 9886776714

PUBLIC NOTICE
Public are informed that, my client Manjunath V.S. is the absolute owner of Eastern portion of Property No. 49, formed out of Sy. No. 73 & 74, measuring East to West 30 feet North to South 40 feet in all measuring about 1200 sq. ft., out of which towards Southern portion of Old Property No. 49, New BBMP Municipal No. 34, E-Katha/E-Asthi BBMP No. 1181650111, East to West 30 feet and North to South 20 feet in all measuring about 600 Sq.ft., situated at 1st Main Road, Sudham Nagar, Doddabylukhane Village, Kasaba Hobli, Bengaluru, now coming under the limits of BBMP, Ward No. 145, PID No. 48-16-34, and bounded as follows:

East by	Road,
West by	Honnappa's House,
North by	Remaining Northern Portion of Property No. 49,
South by	Road.

and informing general public that Manjunath V.S. intent to mortgage the said property in favour of M/s PIRAMAL CAPITAL AND HOUSING FINANCE LIMITED and anyone having any claim over the said property or any other claims by any person/s Nationalized banks, MNC Banks Private Banks, Co-Operative Banks any Financial institutions Governed by the RBI Rules may lodge their objections in writing within 07 days from this day to the under mentioned Advocate.
KSR Associates
ADVOCATES & LEGAL CONSULTANTS
OFFICE# 53/1, 1th Floor, Guttahalli Main Road, D.T. Street, 8th Cross, Malleshwaram, Bangalore – 560 003 • Email: raviksadvocate@gmail.com • Mobile: 99450 00789

ಕೆಪಿಎಸ್‌ಸಿಯಲ್ಲಿ ಆಮೂಲಾಗ್ರ ಸುಧಾರಣೆ ತರಲು ಆಗ್ರಹ

ಸರಕಾರದ ಹಸ್ತಕ್ಷೇಪ, ಕೆಎಎಸ್ ಪರೀಕ್ಷೆಯಲ್ಲಿ ಮತ್ತೆ ಎಡವಟ್ಟು: ಆರ್.ಅಶೋಕ

ಬೆಂಗಳೂರು: ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆಯಲ್ಲಿ ಕೆಪಿಎಸ್‌ಸಿ ಮತ್ತೊಮ್ಮೆ ಎಡವಟ್ಟು ಮಾಡಿಕೊಂಡಿದ್ದು ಲಕ್ಷಾಂತರ ಉದ್ಯೋಗಾ ಕಾಂಕ್ಷಿಗಳ ಭವಿಷ್ಯ ಡೋಲಾಯ ಮಾನವಾಗಿದೆ. ಸಿಎಂ ಸಿದ್ದರಾಮಯ್ಯನವರ ರಾಜಕೀಯ ಹಸ್ತಕ್ಷೇಪವೇ ಇದಕ್ಕೆ ಕಾರಣ ಎಂದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ.

ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಸಂಖ್ಯೆಯಲ್ಲಿ ಕುಸಿತ, ನಂಬಿಕೆ ಕಳೆದುಕೊಂಡ ಅಭ್ಯರ್ಥಿಗಳು

ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ, ಕಾಂಗ್ರೆಸ್ ಸರಕಾರ ಮರು ಪರೀಕ್ಷೆಯಲ್ಲೂ ಮುಗ್ಗರಿಸಿದೆ. ಆಗಸ್ಟ್‌ನಲ್ಲಿ ನಡೆದ 2023-24ನೇ ಸಾಲಿನ ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಪೂರ್ವಭಾವಿ ಪರೀಕ್ಷೆಯಲ್ಲಿ ಭಾರಿ ಎಡವಟ್ಟುಗಳು ಕಂಡುಬಂದಿತ್ತು. ಅಭ್ಯರ್ಥಿಗಳ ಆಕ್ರೋಶಕ್ಕೆ ಮಣಿದ ಸರ್ಕಾರ ಮರು ಪರೀಕ್ಷೆ ನಡೆಸಿತ್ತು.

ಆದರೆ ಅದರಲ್ಲೂ ಎಡವಟ್ಟುಗಳ ಮೇಲೆ ಎಡವಟ್ಟು ಮಾಡಿದ್ದು, ಲಕ್ಷಾಂತರ ಉದ್ಯೋಗಾಕಾಂಕ್ಷಿಗಳ ಭವಿಷ್ಯ ಡೋಲಾಯಮಾನವಾಗಿದೆ. ಭಾಷಾಂತರದಲ್ಲಿ ಲೋಪ, ಓಎಂಆರ್ ಶೀಟ್ ಮತ್ತು ನೋಂದಣಿ ಸಂಖ್ಯೆ ಅದಲು ಬದಲು, ಕೆಲವೆಡೆ 45 ನಿಮಿಷ ತಡವಾಗಿ ಪರೀಕ್ಷೆ ಆರಂಭ, ಹೀಗೆ ಸಾಲು ಸಾಲು ಎಡವಟ್ಟುಗಳಿಂದ ಕೂಡಿದ್ದ ಭಾನುವಾರದ ಮರು ಪರೀಕ್ಷೆ ಮತ್ತೊಮ್ಮೆ ಅಭ್ಯರ್ಥಿಗಳ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ದೂರಿದ್ದಾರೆ.

ಮರುಪರೀಕ್ಷೆಯಲ್ಲಿ ಕುಸಿದ ಹಾಜರಾತಿ: ಮರುಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದ 2.10 ಲಕ್ಷ ಅಭ್ಯರ್ಥಿಗಳ ಪೈಕಿ ಕೇವಲ 1 ಲಕ್ಷ ಮಂದಿ ಪರೀಕ್ಷೆಗೆ ಹಾಜರಾಗಿದ್ದಾರೆ. ಆಗಸ್ಟ್‌ನಲ್ಲಿ ನಡೆದ ಪರೀಕ್ಷೆಯಲ್ಲಿ ಶೇ.62.52 ರಷ್ಟಿದ್ದ ಹಾಜರಾತಿ, ಮರುಪರೀಕ್ಷೆಯಲ್ಲಿ ಶೇ.47.7 ಕ್ಕೆ ಕುಸಿದಿದೆ. ಅಂದರೆ ಅಭ್ಯರ್ಥಿಗಳು ಕಾಂಗ್ರೆಸ್ ಸರ್ಕಾರ ಹಾಗೂ ಕೆಪಿಎಸ್‌ಸಿ ಮೇಲೆ ನಂಬಿಕೆ ಕಳೆದುಕೊಂಡಿದ್ದಾರೆ ಎಂದು ಅವರು ಹೇಳಿದ್ದಾರೆ.

16 ಸದಸ್ಯರಿರುವ ಕೆಪಿಎಸ್‌ಸಿ ದೇಶದಲ್ಲೇ ದೊಡ್ಡ ಆಯೋಗ. ಅವರ ಸಂಬಳ, ಸಾರಿಗೆಗೆಂದು ಸರಕಾರ ಕೋಟ್ಯಂತರ ರುಪಾಯಿ ತೆರಿಗೆ ಹಣ ವ್ಯಯ ಮಾಡುತ್ತದೆ. ಇಷ್ಟಾದರೂ ಒಂದು ಗೊಂದಲಮುಕ್ತ ಪೂರ್ವಭಾವಿ ಪರೀಕ್ಷೆ ನಡೆಸಲು ವಿಫಲವಾಗುತ್ತದೆ ಎಂದರೆ ಇದನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಲೇಬೇಕು. ಲಕ್ಷಾಂತರ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಕಷ್ಟು ಹಣ, ಸಮಯ ಸಮರ್ಪಿಸುತ್ತಾರೆ. ಅನೇಕರು ತಮ್ಮ ಭವಿಷ್ಯ ಪಣಕ್ಕಿಟ್ಟು ತಯಾರಿ ನಡೆಸುತ್ತಾರೆ. ಅನೇಕ ಬಡ ಅಭ್ಯರ್ಥಿಗಳು ಸಾಲ ಮಾಡಿ ಕೋಚಿಂಗ್ ಪಡೆಯುತ್ತಾರೆ. ಇಷ್ಟೆಲ್ಲಾ ತನು-ಮನ-ಧನ ಧಾರೆ ಎರೆದು ಪರೀಕ್ಷೆಗೆ ಕುಳಿತುಕೊಳ್ಳುವ ಅಭ್ಯರ್ಥಿಗಳಿಗೆ ಈ ರೀತಿ ಗೊಂದಲವಾಗುತ್ತಿದ್ದರೆ ಸರಕಾರ ಅವರ ಭವಿಷ್ಯದ ಜೊತೆ ಚೆಲ್ಲಾಟವಾಡಿದಂತಾಗಿದೆ.

ಅಭ್ಯರ್ಥಿಗಳು ಹಾಗೂ ಆಡಳಿತದ ಹಿತದೃಷ್ಟಿಯಿಂದ ಸರಕಾರ ಎಚ್ಚೆತ್ತುಕೊಂಡು ಕೆಪಿಎಸ್‌ಸಿಯಲ್ಲಿ ಆಮೂಲಾಗ್ರ ಸುಧಾರಣೆ ತರುವ ಮೂಲಕ ಇಡೀ ನೇಮಕಾತಿ ವ್ಯವಸ್ಥೆಗೆ ಹೊಸ ಕಾಯಕಲ್ಪ ನೀಡಲಿ ಎಂದು ಅಶೋಕ ಆಗ್ರಹಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ರಿಯಾಯಿತಿ ಬಸ್ ಪಾಸ್‌ಗೆ ಅವಕಾಶ

ಬೆಂಗಳೂರು: ಕೆಎಸ್‌ಆರ್‌ಟಿಸಿ ವತಿಯಿಂದ 2025ನೇ ಸಾಲಿನ ವಿಶೇಷಚೇತನರ ರಿಯಾಯಿತಿ ಪಾಸುಗಳ ವಿತರಣೆ,ನವೀಕರಣವನ್ನು ಡಿ.30 ರಿಂದ ಪ್ರಾರಂಭಿಸಲಾಗುವುದು. ಈ ಸಂಬಂಧ ಫಲಾನುಭವಿ ಗಳು ಸೇವಾಸಿಂಧು ತಂತ್ರಾಂಶ ದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ. 2024ನೇ ಸಾಲಿನಲ್ಲಿ ವಿತರಿಸಿರುವ ಬಸ್ ಪಾಸ್‌ಗಳನ್ನು 2025 ನೇ ಫೆ.28 ರವರೆಗೆ ಮಾನ್ಯ ಮಾಡ ಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಹೊಸ ವರ್ಷ ಆಚರಣೆ; ಕಬ್ಬನ್ ಪಾರ್ಕ್‌ಗೆ ನಿರ್ಬಂಧ

ಬೆಂಗಳೂರು: ಬೆಂಗಳೂರು ನಗರ ಕೇಂದ್ರ ವಿಭಾಗದ ಪೊಲೀಸ್ ಉಪ ಆಯುಕ್ತರ ಆದೇಶದಂತೆ, ಹೊಸ ವರ್ಷದ ಆಗಮನ ಆಚರಣೆ ಸಂಬಂಧ ಕಬ್ಬನ್ ಉದ್ಯಾನವನಕ್ಕೆ ಹೆಚ್ಚು ಸಂಖ್ಯೆಯಲ್ಲಿ ಸಾರ್ವಜನಿಕರು ಭೇಟಿ ನೀಡುವ ಸಂಭವವಿರುವ ಹಿನ್ನಲೆ ಮುಂಜಾಗ್ರತಾ ಕ್ರಮವಾಗಿ ಡಿ.31 ರಂದು ಸಂಜೆ 6.00 ಗಂಟೆಯಿಂದ ಕಬ್ಬನ್ ಉದ್ಯಾನವನದ ಎಲ್ಲಾ ದ್ವಾರಗಳನ್ನು ಮುಚ್ಚಲಾಗುತ್ತದೆ. 2025 ನೇ ಜನವರಿ 01ರ ಬೆಳಗ್ಗೆ 8.00 ಗಂಟೆಗೆ ಎಂದಿನಂತೆ ಕಬ್ಬನ್ ಉದ್ಯಾನವನದ ಎಲ್ಲಾ ಪ್ರವೇಶ ದ್ವಾರಗಳನ್ನು ತೆರೆಯಲಾಗುವುದು. ಸಾರ್ವಜನಿಕರು ಸಹಕರಿಸುವಂತೆ ತೋಟಗಾರಿಕಾ ಇಲಾಖೆ ಮನವಿ ಮಾಡಿದೆ.

ಪ್ರಯಾಣ ದರ ಏರಿಕೆ ಪ್ರಸ್ತಾವನೆಯಿಲ್ಲ

ಬೆಂಗಳೂರು: ರಾಜ್ಯದಲ್ಲಿ ಬಸ್ ಪ್ರಯಾಣ ದರ ಏರಿಕೆ ಮಾಡುವ ಪ್ರಸ್ತಾವನೆ ಸರಕಾರದ ಮುಂದಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನಿಗಮಗಳು ಈ ಹಿಂದೆ ಹಲವು ಪ್ರಸ್ತಾವನೆ ಸಲ್ಲಿಸಿವೆ. ಆದರೆ, ಸರಕಾರದ ಮುಂದೆ ಪ್ರಯಾಣ ದರವನ್ನು ಹೆಚ್ಚಳ ಮಾಡುವ ಯಾವುದೇ ಯೋಜನೆಗಳು ಸದ್ಯಕ್ಕಿಲ್ಲ. ಪ್ರಯಾಣ ದರ ಏರಿಕೆ ಕುರಿತು ರಾಜ್ಯ ಸರಕಾರ ತೀರ್ಮಾನಿಸಲಿದೆ. ಮುಖ್ಯ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪ್ರಯಾಣ ದರ ಏರಿಕೆಗೆ ಶಿಫಾರಸು ಮಾಡಿದ್ದರೂ ಅಂತಿಮ ನಿರ್ಧಾರ ಸರಕಾರದ್ದು ಎಂದರು. ಪ್ರಯಾಣ ದರ ಏರಿಕೆ ಮಾಡುವ ಕುರಿತಂತೆ ನಾಲ್ಕೂ ನಿಗಮಗಳು ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಬಹುದು. ಇದರಲ್ಲಿ ಎಷ್ಟರ ಪ್ರಮಾಣದಲ್ಲಿ ದರ ಏರಿಕೆ ಮಾಡಬೇಕು ಎಂದು ಪ್ರಸ್ತಾವನೆಯಲ್ಲಿ ತಿಳಿಸಬಹುದು. ನಂತರ ಸರಕಾರದ ಮಟ್ಟದಲ್ಲಿ ಚರ್ಚೆ ಮಾಡಿ ಪ್ರಯಾಣ ದರ ಏರಿಕೆ ಮಾಡಬೇಕೋ ಬೇಡವೋ ಎಂಬುದನ್ನು ತೀರ್ಮಾನ ತೆಗೆದುಕೊಳ್ಳಲಾಗುತ್ತದೆ ಎಂದರು.

ಸುಧಾ ಬರಗೂರುಗೆ ಪತಿ ವಿಯೋಗ

ಬೆಂಗಳೂರು: ವಾಗ್ಮಿ, ಹಾಸ್ಯಗಾರ್ತಿ ಸುಧಾ ಬರಗೂರು ಅವರ ಪತಿ ಜಯಪ್ರಕಾಶ್ ಬರಗೂರು ನಗರದಲ್ಲಿ ಸೋಮವಾರ ನಿಧನರಾಗಿದ್ದಾರೆ. ಕೆಲ ವರ್ಷಗಳಿಂದ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಜಯಪ್ರಕಾಶ್ ಬರಗೂರು ಅವರು ಅನಾರೋಗ್ಯ ಉಲ್ಬಣಿಸಿದ್ದರಿಂದ ಮತ್ತೆ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ಚಿಕಿತ್ಸೆ ಫಲಿಸದೇ ಸೋಮವಾರ ಕೊನೆಯುಸಿರೆಳೆದರೆಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರಿಗೆ 69 ವರ್ಷ ವಯಸ್ಸಾಗಿತ್ತು. ಪತ್ನಿ ಮತ್ತು ಓರ್ವ ಪುತ್ರಿ ಇದ್ದಾರೆ. ಮೃತರ ಪಾರ್ಥಿವ ಶರೀರವನ್ನು ನಗರದ ಚನ್ನಮ್ಮನಕೆರೆ ಅಚ್ಚುಕಟ್ಟು ಬಳಿಯಿರುವ ಸ್ವಗೃಹಕ್ಕೆ ತರಲಾಗಿದ್ದು ಮಂಗಳವಾರ ಬೆಳಗ್ಗೆ ಸಾರ್ವಜನಿಕ ದರ್ಶನದ ಬಳಿಕ ಅಂತ್ಯ ಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ಮಾಹಿತಿ ನೀಡಿವೆ.

ಇಂದು ವಚನಗಾನ ವಿಹಂಗಮ

ಬೆಂಗಳೂರು: ರಂಗಸಂಸ್ಥಾನ ಸಂಸ್ಥೆ ಶೇಷಾದ್ರಿಪುರ ಶಿಕ್ಷಣ ದತ್ತಿ ಮತ್ತು ಬಸವ ಅಧ್ಯಯನ ಕೇಂದ್ರದ ಸಹಯೋಗದಲ್ಲಿ ಮಂಗಳವಾರ ನಗರದಲ್ಲಿ ವಚನಗಾನ ವಿಹಂಗಮ ಕಾರ್ಯಕ್ರಮ ಹಮ್ಮಿ ಕೊಂಡಿದೆ. ಮಂಗಳವಾರ ಶೇಷಾದ್ರಿಪುರಂ ಕಾಲೇಜಿನ ಸೆಮಿನಾರ್ ಸಭಾಂಗಣದಲ್ಲಿ ಬೆಳಗ್ಗೆ 9.30ಕ್ಕೆ ರಂಗಸಂಸ್ಥಾನ ತಂಡ ಹಾಗೂ ಶೇಷಾದ್ರಿಪುರ ಕಾಲೇಜಿನ ಶಿಬಿರಾರ್ಥಿಗಳು ಪ್ರಸ್ತುತಪಡಿಸುವ ಶತಕಂಠಗಳ ಸಮೂಹ ಗಾಯನ 'ವಚನಗಾನ ವಿಹಂಗಮ' ಕಾರ್ಯಕ್ರಮಕ್ಕೆ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಕಟಪೂರ್ವ ಅಧ್ಯಕ್ಷರಾದ ಡಾ.ಸಿ. ಸೋಮಶೇಖರ್ ಚಾಲನೆ ನೀಡುವರು. ಶೇಷಾದ್ರಿಪುರ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ರಾದ ಪ್ರೊ. ಆರ್.ವಿ.ಮಂಜುನಾಥ್, ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಜಿ.ಕೆ.ಮಂಜುನಾಥ್ ಭಾಗವಹಿಸಲಿದ್ದಾರೆ.

{ ಕಿಮ್ಮನೆ ರತ್ನಾಕರ } ಮಾಜಿ ಸಚಿವ

ಕಲಾಪ ಮುಂದೂಡಿದಾಗ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಿ.ಟಿ.ರವಿ ಅಹಿತಕರ ಮಾತು ಹೇಳಿದ್ದಾರೆ. ಈ ಘಟನೆ ಪರಿಷತ್ತಿನ ಸಭಾಂಗಣದೊಳಗೆ ನಡೆದಿರುವುದನ್ನು ಸಭಾಪತಿ ಬಸವರಾಜ ಹೊರಟ್ಟಿ ಮರೆಯಬಾರದು. ಸಾಂವಿಧಾನಿಕ ಹುದ್ದೆಯಲ್ಲಿರುವ ಅವರಿಗೆ ಕ್ರಮ ಕೈಗೊಳ್ಳುವ ಅಧಿಕಾರವಿತ್ತು. ಕಲಾಪದ ವ್ಯಾಪ್ತಿಗೆ ಬರುವುದಿಲ್ಲವೆಂದು ನುಣುಚಿಕೊಳ್ಳುವುದು ಸರಿಯಲ್ಲ.

ಪ್ರಕರಣಕ್ಕೂ ಪ್ರಿಯಾಂಕ್ ಖರ್ಗೆಗೂ ಸಂಬಂಧವಿಲ್ಲ। ಆತ್ಮಹತ್ಯೆ ಪತ್ರದಲ್ಲಿ ಖರ್ಗೆ ಹೆಸರು ನಮೂದಿಸಿಲ್ಲ: ಡಿಸಿಎಂ ಶಿವಕುಮಾರ್ ಸಮರ್ಥನೆ

ನಮ್ಮದು ಸ್ವಚ್ಛ ಆಡಳಿತ: ಡಿಕೆಶಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನಮ್ಮದು ಸ್ವಚ್ಛ ಆಡಳಿತದ ಸರಕಾರ. ಗುತ್ತಿಗೆದಾರನ ಸಾವಿಗೂ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೂ ಯಾವುದೇ ಸಂಬಂಧವಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಅವರ ಪಾತ್ರವಿಲ್ಲ. ಆತ್ಮಹತ್ಯೆ ಪತ್ರದಲ್ಲಿ ಅವರ ವಿರುದ್ಧ ನೇರ ಆರೋಪವಿಲ್ಲ. ಬೇರೆಯವರ ಮೇಲೆ ಆರೋಪ ಮಾಡಿದಾಕ್ಷಣ ಇವರು ರಾಜೀನಾಮೆ ನೀಡಲು ಸಾಧ್ಯವಿಲ್ಲ. ಪ್ರಿಯಾಂಕ್ ಖರ್ಗೆ ಅವರ ಪ್ರಾಮಾಣಿಕತೆ ಬಗ್ಗೆ ನಮಗೆ ಗೊತ್ತಿದೆ. ಗುತ್ತಿಗೆದಾರನ ಸಾವಿನ ಬಗ್ಗೆ ಕಾನೂನು ಪ್ರಕಾರ ತನಿಖೆ ನಡೆಯುತ್ತದೆ ಎಂದರು.

ಸಾವಿಗೆ ಕಾರಣವಾಗಿರುವ ಆರೋಪ ಹೊತ್ತಿರುವ ರಾಜು ಎಂಬುವವರು ನಿಮ್ಮ ಜತೆ, ಸಿಎಂ, ಪ್ರಿಯಾಂಕ್ ಖರ್ಗೆ ಅವರ ಜತೆಯಿರುವ ಫೋಟೋಗಳನ್ನು ವಿಜಯೇಂದ್ರ ಅವರು ಬಿಡುಗಡೆ ಮಾಡಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿ, ನನ್ನ ಜೊತೆ ವಿಜಯೇಂದ್ರ, ಯಡಿಯೂರಪ್ಪ ಅವರು ಇರುವ ಫೋಟೋಗಳಿವೆ. ನಮ್ಮ ಮನೆಗೆ ಬಂದವರು, ಮದುವೆ ಕಾರ್ಯಕ್ರಮಕ್ಕೆ ಹೋದಾಗ ಅನೇಕರು ನಮ್ಮ ಜತೆ ಫೋಟೋ ತೆಗೆಸಿಕೊಳ್ಳುತ್ತಾರೆ. ವಿಜಯೇಂದ್ರ, ಯಡಿಯೂರಪ್ಪ ಅವರು ಕ್ರಿಮಿನಲ್, ರೌಡಿಗಳು ಸೇರಿದಂತೆ ಯಾರೆಲ್ಲರ ಜತೆ ಫೋಟೊ ತೆಗೆಸಿಕೊಂಡಿದ್ದಾರೆ ಎಂದು ನಾನು ಬಿಡುಗಡೆ ಮಾಡಲೇ? ಅವರಿಗೆ ಬೇಕು ಎಂದರೆ ಬಿಡುಗಡೆ ಮಾಡುತ್ತೇನೆ. ಆರೋಪಿಗಳು ಹಾಗೂ ನಮ್ಮ ಜತೆ ಮಾತುಕತೆ, ವ್ಯವಹಾರ ನಡೆದಿರುವುದಕ್ಕೆ ದಾಖಲೆ ಇದ್ದರೆ ಆರೋಪ ಮಾಡಲಿ. ನಾವು ಉತ್ತಮವಾಗಿ ಸರಕಾರ ನಡೆಸುತ್ತಿದ್ದು, ವಿರೋಧ ಪಕ್ಷದವರು ಸುಮ್ಮನೆ ಮಾತಾಡಬೇಕು ಎಂಬ ಕಾರಣಕ್ಕೆ ಮಾತನಾಡುತ್ತಾರೆ. ಮಾತಾಡಲಿ ಬಿಡಿ ಎಂದು ಹೇಳಿದರು.

ಪ್ರಿಯಾಂಕ್ ಬಗ್ಗೆ ಬಿಜೆಪಿಗೆ ಅಸೂಯೆ

ಬಿಜೆಪಿಯವರು ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೇಳುತ್ತಿರುವ ಬಗ್ಗೆ ಕೇಳಿದಾಗ, ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ. ಅವರು ಯಾವ ತಪ್ಪು ಮಾಡಿದ್ದಾರೆ ಎಂದು ರಾಜೀನಾಮೆ ನೀಡಬೇಕು? ಪ್ರಿಯಾಂಕ್ ಖರ್ಗೆ ನಮ್ಮ ಪಕ್ಷದ ಧ್ವನಿ. ಅವರ ಮೇಲಿನ ಅಸೂಯೆಗೆ ವಿರೋಧ ಪಕ್ಷಗಳು ಈ ರೀತಿ ನಡೆದುಕೊಳ್ಳುತ್ತಿವೆ. ದಲಿತ ಸಮುದಾಯದ ನಾಯಕ ಇಷ್ಟು ದೊಡ್ಡ ಮಟ್ಟಕ್ಕೆ ಬೆಳೆಯುತ್ತಿರುವುದನ್ನು ಸಹಿಸಲು ಅವರಿಗೆ ಸಾಧ್ಯವಾಗುತ್ತಿಲ್ಲ. ಐಟಿ-ಬಿಟಿ ಇಲಾಖೆಯನ್ನು ಸಮರ್ಥವಾಗಿ ಮುನ್ನಡೆಸುತ್ತಿದ್ದಾರೆ. ಕೃಷ್ಣ ಅವರ ಸರಕಾರದ ನಂತರ ಐಟಿ-ಬಿಟಿ ಕ್ಷೇತ್ರದಲ್ಲಿ ರಾಜ್ಯವನ್ನು ಯಶಸ್ವಿಯಾಗಿ ಮುನ್ನಡೆಸುತ್ತಿರುವುದು ಪ್ರಿಯಾಂಕ್ ಖರ್ಗೆ. ಹೀಗಾಗಿ ಅವರನ್ನು ಕೆಳಗಿಳಿಸುವ ಸಂಚು ಮಾಡುತ್ತಿದ್ದಾರೆ ಎಂದರು.

- ಈ ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಅವರ ಪಾತ್ರವಿಲ್ಲ.
- ಆತ್ಮಹತ್ಯೆ ಪತ್ರದಲ್ಲಿ ಅವರ ವಿರುದ್ಧ ನೇರ ಆರೋಪವಿಲ್ಲ
- ಬಿಜೆಪಿ ವಿರುದ್ಧ ಡಿಸಿಎಂ ಡಿಕೆಶಿ ವಾಗ್ದಾಳಿ

ಬಿಜೆಪಿಯವರು ಹೇಳಿದ್ದೆಲ್ಲವನ್ನು ಕೇಳುವುದಿಲ್ಲ: ಡಾ.ಜಿ. ಪರಮೇಶ್ವರ

ಎಲ್ಲ ಪ್ರಕರಣ ಸಿಬಿಐಗೆ ವಹಿಸಲಾಗಲ್ಲ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಬಿಜೆಪಿಯವರು ಹೇಳಿದ ಮಾತ್ರಕ್ಕೆ ಎಲ್ಲ ಪ್ರಕರಣಗಳನ್ನು ಸಿಬಿಐಗೆ ವಹಿಸಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ ಸ್ಪಷ್ಟಪಡಿಸಿದರು.

ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣವನ್ನು ಸಿಐಡಿಗೆ ವಹಿಸುವ ಬದಲು ಸಿಬಿಐಗೆ ವಹಿಸಬೇಕು ಬಿಜೆಪಿಗರು ಆಗ್ರಹಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಗೃಹ ಸಚಿವರು, ಸಿಎಲ್ಲ ಪ್ರಕರಣಗಳನ್ನು ಸಿಬಿಐಗೆ ವಹಿಸಲು ಆಗುವುದಿಲ್ಲ. ಸಿಐಡಿ ಸಮರ್ಥವಾಗಿದೆ. ಅನೇಕ ಪ್ರಕರಣಗಳಲ್ಲಿ ಸಿಐಡಿ ತನಿಖೆಯ ವರದಿ ಬಂದಿದೆ ಯಲ್ಲವೇ? ಬಿಜೆಪಿಯವರು ಹೇಳಿದ್ದೆಲ್ಲ ವನ್ನು ಕೇಳುವುದಿಲ್ಲ. ಸಕರಾತ್ಮಕವಾಗಿ ಸಲಹೆ, ಸೂಚನೆ ನೀಡಿದರೆ ಕೇಳುತ್ತೇವೆ. ಅನಾವಶ್ಯಕವಾಗಿ ಎಲ್ಲದರಲ್ಲೂ ರಾಜಕೀಯ ಮಾಡಲು ಹೋದರೆ ಕೇಳುವುದಿಲ್ಲ ಎಂದರು.

ಇನ್ನು ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಬಿಜೆಪಿ ಆಗ್ರಹಿಸುತ್ತಿರುವುದಕ್ಕೆ ಆಕ್ಷೇಪವ್ಯಕ್ತಪಡಿಸಿದ ಅವರು, ಸಚಿವರ ಮೇಲೆ ಅನವಶ್ಯಕ ಆಪಾದನೆ ಮಾಡುವುದು ಯಾವುದೇ ಕಾರಣಕ್ಕೂ ಸರಿ ಇರುವುದಿಲ್ಲ. ಗುತ್ತಿಗೆದಾರ ಸಚಿನ್ ಡೆತ್‌ನೋಟ್‌ನಲ್ಲಿ ಅವರ ಹೆಸರು ಕೂಡ ಇಲ್ಲ ಎಂದು ಇಲಾಖೆಯ ಅಧಿಕಾರಿಗಳು ಹೇಳಿದ್ದಾರೆ. ಸಚಿವರ ಹೆಸರನ್ನು ತಂದು, ಸರಕಾರಕ್ಕೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ. ಸತ್ಯಾಸತ್ಯತೆ ಹೊರಬರಲಿ ಎಂಬ ದೃಷ್ಟಿಯಿಂದ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಸಿಐಡಿಗೆ ವಹಿಸಲಾಗಿದೆ ಎಂದು ತಿಳಿಸಿದರು.

ತನಿಖೆಯ ವರದಿ ಬಂದ ನಂತರ ಏನು ಎಂಬುದನ್ನು ಹೇಳೋಣ. ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ಕೊಡುವ ಅಗತ್ಯ ಇಲ್ಲ. ಅನಾವಶ್ಯಕವಾಗಿ ಅವರ ಹೆಸರನ್ನು ತೆಗೆದು ಕೊಂಡು ರಾಜೀನಾಮೆ ಕೊಡುವಂತೆ ಒತ್ತಾಯ ಮಾಡುತ್ತಿದ್ದಾರೆ ಎಂದರು.

ಸಾರ್ವಜನಿಕರು ಬಹಳ ಎಚ್ಚರಿಕೆಯಿಂದ ಹೊಸ ವರ್ಷದ ಸಂತೋಷವನ್ನು ಹಂಚಿ ಕೊಳ್ಳಬೇಕು. ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದೇನೆ. ಅಗತ್ಯ ಬಂದೋಬಸ್ತ್ ಕೈಗೊಳ್ಳಲಾಗಿದೆ. ಯಾರಿಗೂ ತೊಂದರೆಯಾಗದಂತೆ ಹೊಸ ವರ್ಷ ಆಚರಿಸುವಂತೆ ಸಾರ್ವಜನಿಕರಲ್ಲಿ ವಿನಂತಿಸಿಕೊಳ್ಳುತ್ತೇನೆ.
-ಡಾ.ಜಿ.ಪರಮೇಶ್ವರ, ಗೃಹ ಸಚಿವ

ಡಾ.ಬಿ.ಟಿ.ರುದ್ರೇಶ್ ಅವರಿಗೆ ಪಿಎಚ್.ಡಿ ಪದವಿ

ಬೆಂಗಳೂರು: ಹೋಮಿಯೋಪತಿ ತಜ್ಞ ಡಾ.ಬಿ.ಟಿ.ರುದ್ರೇಶ್ ಅವರು 'ಮಹಿಳೆಯರ ಸಂತಾನಹೀನತೆಯಲ್ಲಿ ಹೋಮಿಯೋಪತಿ ಫಲದಾಯಕತೆಯ ಪಾತ್ರ'ಎಂಬ ವಿಷಯ ಕುರಿತು ಮಂಡಿಸಿದ ಪ್ರಬಂಧಕ್ಕೆ ಪುಣೆಯ ಸ್ವಾಯತ್ತ ವಿವಿಯ ಡಾ. ಡಿ.ವೈ.ಪಾಟೀಲ್ ವಿದ್ಯಾಪೀಠ ಪಿಎಚ್.ಡಿ ಪದವಿ ನೀಡಿದೆ. ಹೋಮಿಯೋಪತಿ ವೈದ್ಯ ಕ್ಷೇತ್ರದಲ್ಲಿ ಎಂ.ಡಿ.ಪದವೀಧರರಾಗಿ ನಾಲ್ಕೂವರೆ ದಶಕದಿಂದ ಚಿಕಿತ್ಸೆ ನೀಡುತ್ತಿದ್ದಾರೆ. ಮೂರು ಸಾವಿರ ಸಂತಾನಹೀನ ದಂಪತಿಗಳಿಗೆ ಚಿಕಿತ್ಸೆ ನೀಡಿ ಯಶಸ್ವಿಯಾಗಿರುವ ಡಾ.ರುದ್ರೇಶ್ ಅವರಿಗೆ ಕುವೆಂಪು ವಿಶ್ವವಿದ್ಯಾಲಯದಿಂದ ಗೌಡರ ಡಾಕ್ಟರೇಟ್ ಪದವಿ. ಹಂಪಿ ವಿಶ್ವವಿದ್ಯಾಲಯದ ನಾಡೋಜ ಪದವಿ ಪುರಸ್ಕೃತರು.

ಬಿಎಂಟಿಸಿಯಲ್ಲಿ ಬಳಕೆಯಾಗದ ಕ್ಯೂ ಆರ್ ಕೋಡ್ ಪೇಮೆಂಟ್

ಬೆಂಗಳೂರು: ಬಿಎಂಟಿಸಿಯ ಬಹುತೇಕ ಬಸ್‌ಗಳಲ್ಲಿ ಕ್ಯೂ ಆರ್ ಕೋಡ್ ಆಧಾರಿತ ಯುಪಿಐ ಪಾವತಿಯನ್ನು ಪರಿಚಯಿಸಿದ್ದರೂ ನಿರ್ವಾಹಕರು ಕ್ಯೂ ಆರ್ ಕೋಡ್ ಪಾವತಿಯನ್ನು ಬಳಕೆ ಮಾಡದೇ ನಿರ್ಲಕ್ಷ್ಯ ವಹಿಸಿದ್ದಾರೆ ಎನ್ನುವ ಮಾತುಗಳು ಕೇಳಿ ಬಂದಿದೆ.

ಅನೇಕ ಬಸ್‌ಗಳು ಈಗ ತಮ್ಮ ಸೈಡ್ ಪ್ಯಾನೆಲ್‌ಗಳಲ್ಲಿ ಕ್ಯೂಆರ್ ಕೋಡ್ ಪೋಸ್ಟರ್‌ಗಳನ್ನು ಹೊಂದಿದ್ದು, ಪ್ರಯಾಣಿಕರಿಗೆ ಡಿಜಿಟಲ್ ಪಾವತಿಗೆ ಅನುವು ಮಾಡಿಕೊಡುತ್ತದೆ. ಪಾವತಿ ಪೂರ್ಣಗೊಂಡ ಬಳಿಕ ಕಂಡಕ್ಟರ್‌ಗಳು ಟಿಕೆಟ್ ನೀಡುತ್ತಿದ್ದು, ಆದರೆ ವ್ಯವಸ್ಥೆಯು ಸಂಪೂರ್ಣವಾಗಿ ನಗರದ ಬಸ್‌ಗಳಲ್ಲಿ ಜಾರಿಯಾಗಿಲ್ಲ.

ನಗರದ ಮಾಲ್‌ಗಳಿಂದ ಹಿಡಿದು ಸಣ್ಣ ಸಣ್ಣ ಶಾಪ್‌ಗಳಲ್ಲಿಯೂ ಯುಪಿಐ ಬಳಕೆ ಮಾಡಲಾಗುತ್ತಿದದರೂ ನಗರವಾಸಿಗಳ ಜೀವನಾಡಿಯದ ಬಿಎಂಟಿಸಿಯಲ್ಲಿ ಈ ವ್ಯವಸ್ಥೆಯನ್ನು ಸಂಪೂರ್ಣವಾಗಿ ಬಳಕೆ ಮಾಡದೇ ಇರುವುದು ನಿರಾಶಾದಾಯಕವಾಗಿದೆ. ಎಲ್ಲೆಂದರಲ್ಲಿ ತಂತ್ರಜ್ಞಾನ ಬಳಕೆಯಾಗುತ್ತಿದ್ದು, ಸಾರ್ವಜನಿಕ ಸಾರಿಗೆಯಲ್ಲಿ ಮಾತ್ರ ಇನ್ನೂ ಡಿಜಿಟಲ್ ವ್ಯವಸ್ಥೆಗಳು ಬಳಕೆಯಾಗುತ್ತಿಲ್ಲ. ಡಿಜಿಟಲ್ ಪಾವತಿಗಳು ಅಮೂಲ್ಯ ಸಮಯವನ್ನು ಉಳಿಸುವುದು ಮಾತ್ರವಲ್ಲದೆ ಪ್ರಯಾಣವನ್ನು ಹೆಚ್ಚು ಅನುಕೂಲಕರವಾಗಿಸುತ್ತದೆ. ವಿಶೇಷವಾಗಿ ಬಸ್‌ಗಳು ಕಿಕ್ಕಿರಿದು ತುಂಬಿರುವ ಸಮಯದಲ್ಲಿ ಚಿಲ್ಲರೆ ಸಮಸ್ಯೆಯನ್ನು ತಪ್ಪಿಸುತ್ತದೆ ಎಂದು ಪ್ರಯಾಣಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಯುಪಿಐ ಪಾವತಿಗಳ ಕುರಿತು ಬಿಎಂಟಿಸಿ ಬಸ್ ನಿರ್ವಾಹಕರು ಮಾತನಾಡಿ, ವಿವಿಧ ಕಾರಣಗಳಿಗಾಗಿ ಕ್ಯೂಆರ್-ಕೋಡ್ ಆಧಾರಿತ ಯುಪಿಐ ಪಾವತಿಗಳನ್ನು ಸ್ವೀಕರಿಸುವುದು ಕಷ್ಟವಾಗುತ್ತಿದೆ. ಕೆಲವೆಡೆ ಇಂಟರ್‌ನೆಟ್ ಸಂಪರ್ಕದ ಕೊರತೆಯಿಂದಾಗಿ ಹಣ ಪಾವತಿಗೆ ತಡೆ ಉಂಟಾಗಿದ್ದು, ಪಾವತಿಯಾಗಿದೆಯೇ ಅಥವಾ ಇಲ್ಲವೇ ಎಂಬುದನ್ನು ಪರಿಶೀಲಿಸಲು ಸಾಧ್ಯವಾಗುತ್ತಿಲ್ಲ ಎಂದು ದೂರಿದ್ದಾರೆ.

ನಗರದ ನ್ಯಾಷನಲ್ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವ 25ನೇ ಆವೃತ್ತಿಯ ಮೇಳ

ಅವರೆ ಬೇಳೆ ಮೇಳದಲ್ಲಿ ವಿವಿಧ ಖಾದ್ಯ ಸವಿದ ಡಿಸಿಎಂ ಡಿಕೆಶಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನಗರದ ನ್ಯಾಷನಲ್ ಕಾಲೇಜು ಮೈದಾನದಲ್ಲಿ 25ನೇ ಆವೃತ್ತಿಯ ಅವರೆ ಬೇಳೆ ಮೇಳವನ್ನು ಆಯೋಜಿಸಲಾಗಿದ್ದು, ವರ್ಷಾರಂಭದ ವೇಳೆ ಅವರೆ ಬೇಳೆಯ ವಿವಿಧ ಖಾದ್ಯಗಳನ್ನು ಸವಿಯುವ ಅವಕಾಶ ಜನರಿಗೆ ದೊರೆತಿದೆ.

ಅವರೆ ಬೇಳೆ ಮೇಳದಲ್ಲಿ ಅವರೆ ಬೆಳೆಯ ದೋಸೆ, ಪಾಯಸ, ಮಂಚೂರಿಯನ್, ವಡೆ, ಕೋಡುಬಳೆ, ಐಸ್‌ಕ್ರೀಂ, ಹೋಳಿಗೆ, ಉಪ್ಪಿಟ್ಟು, ಪುಲಾವ್, ನಿಪ್ಪಟ್ಟು, ಚಿತ್ರಾನ್ನ, ಬೊಂಡಾ, ರೊಟ್ಟಿ, ಕೋಡುಬಳೆ, ಹಲ್ವಾ ಸೇರಿದಂತೆ 125ಕ್ಕೂ ಹೆಚ್ಚು ತಿನಿಸುಗಳು ಮೇಳದಲ್ಲಿ ಲಭ್ಯವಿದೆ.

ಹಿರಿಯ ನಾಗರಿಕರಿಗಾಗಿ ವಿಶೇಷ ಕೌಂಟರ್ ಜತೆಗೆ ಪ್ರತ್ಯೇಕ ಆಸನ ವ್ಯವಸ್ಥೆಗಳನ್ನು ಮಾಡಲಾಗಿದೆ. ಮೇಳದ ಎಂಟ್ರಿ ಗೆ ಟಿಕೆಟ್ ಇರಿಸಲಾಗಿದೆ. ಆನ್‌ಲೈನ್ ಪ್ಲಾಟ್‌ಫಾರಂ ಮತ್ತು ಸ್ಥಳದಲ್ಲಿ ಪ್ರತಿ ವ್ಯಕ್ತಿಗೆ 100 ರು. ದರದವನ್ನು ಇರಿಸಲಾಗಿದೆ. ನ್ಯಾಷನಲ್ ಕಾಲೇಜು ಮೆಟ್ರೋ ನಿಲ್ದಾಣ ಕೂಡ ಹತ್ತಿರವಿರುವುದರಿಂದ ಮೇಳದ ಸ್ಥಳಕ್ಕೆ ಸುಲಭವಾಗಿ ತಲುಪಲು ಸಹಕಾರಿಯಾಗಿದೆ. ಈ ವರ್ಷ ಮೇಳದಲ್ಲಿ ಖಾದ್ಯಗಳನ್ನು ಸವಿಯದೆ ಯಾರೂ ಮನೆಗೆ ಹೋಗದಂತೆ ಸಜ್ಜುಗೊಳಿಸಲಾಗಿದೆ. ಮಾಗಡಿ ರೈತರು ಬೆಳೆದ ಅವರೆ ಕಾಳುಗಳನ್ನು ಬಳಸಿ ತಿನಿಸು ತಯಾರಿಸುವ ಈ ಮೇಳವನ್ನು ಕಳೆದ 24 ವರ್ಷಗಳಿಂದ ಆಯೋಜಿಸಿಕೊಂಡು ಬರಲಾಗುತ್ತಿದೆ.

ಸೋಮವಾರ ಅವರೆಮೇಳಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಆಗಮಿಸಿ ಅವರೆಬೇಳೆ ದೋಸೆ ಸವಿದರು.

ಅವರೆ ಬೆಲೆ ಖ್ಯಾದ್ಯಗಳನ್ನು ಸವಿದ ಡಿಕೆಶಿ: ಸೋಮವಾರ ಅವರೆಮೇಳಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಆಗಮಿಸಿ ಅವರೆಬೇಳೆ ದೋಸೆ ಸವಿದರು. ಎರಡು ಸೇರು ಅವರೆಬೇಳೆಯನ್ನು, ಅವರೆಬೇಳೆ ಅವಲಕ್ಕಿ, ಮಿಕ್ಸರ್, ಖಾರಾ, ನಿಪ್ಪಟ್ಟು ಖರೀದಿಸಿದ ಬಳಿಕ ಮಾತನಾಡಿ, ಎಲ್ಲರಿಗೂ ಹೊಸವರ್ಷ ಒಳ್ಳೆಯದಾಗಲಿ. ಈ ವರ್ಷದ ಕೊನೆಯ ಕಾರ್ಯಕ್ರಮ ಅವರೆಬೇಳೆ ಮೇಳವಾಗಿದೆ. ಮಾಗಡಿ ಅವರೇಕಾಳು ಎಂದರೆ ಬಹಳ ಸೊಗಡಾಗಿದೆ. ನಾವು ಸಹ ಅವರೆ ಬೆಳೆಯುತ್ತೇವೆ. ಎಲ್ಲಾ ಕಾಳುಗಳಿಗೆ ರಾಜ ಅವರೆ ಬೇಳೆಯಾಗಿದೆ. ಸ್ಪೇಷಲ್ ಪ್ಲೇಟ್ ನಲ್ಲಿ ಕೂಡ ಅವರೇಬೇಳೆಯ ತಿನಿಸುಗಳನ್ನು ತಿಂದುಕೊಂಡು ಬಂದಿದ್ದೇನೆ. ಅವರೇಬೇಳೆ ದೋಸೆ ಮಾಡಲು ನನ್ನ ಪತ್ನಿಗೆ ಹೇಳುತ್ತೇನೆ. ತುಂಬಾ ಚೆನ್ನಾಗಿ ಇತ್ತು. ಅವರೇಬೇಳೆ ರುಚಿ ಬಲ್ಲವನೇ ಬಲ್ಲ. ಸಾವಿರಾರು ಕುಟುಂಬದವರು ಭೇಟಿ ನೀಡಿದ್ದಾರೆ. ಜೀವನದಲ್ಲಿ ಊಟ ಬಟ್ಟೆಯದೇ ಪ್ರಾಮುಖ್ಯತೆ ಆಗಿದೆ ಎಂದರು.

ಬಲ್ಲವನೇ ಬಲ್ಲ ಅವರೆ ರುಚಿಯ. ಎಲ್ಲಾ ಕಾಳುಗಳಿಗೆ ರಾಜ ಅವರೆ. ನಾನೂ ಸಹ ಅವರೆಯನ್ನು ಬೆಳೆಯುವ ರೈತ. ರೈತರಿಂದ, ರೈತರಿಗಾಗಿ, ರೈತರ ಒಳಿತಿಗಾಗಿ ಇಂತಹ ಮೇಳಗಳು ಹೆಚ್ಚು ನಡೆಯಬೇಕು. ಇತರೇ ಮೇಳಗಳಿಗಿಂತ ರೈತರ ಪರವಾದ ಮೇಳಗಳು ಇಂದಿನ ಅಗತ್ಯ.
-ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

2 ಲಕ್ಷಕ್ಕೂ ಅಧಿಕ ಜನರು ಭೇಟಿ

ಅವರೆ ಬೇಳೆ ಮೇಳದ ಆಯೋಜಕರಾದ ಕೆ.ಎಸ್ ಸ್ವಾತಿ ಮಾತನಾಡಿ, ಕಳೆದ ವರ್ಷ ನಾವು ನಿರೀಕ್ಷಿಸಿದಷ್ಟು ಜನರು ಮೇಳಕ್ಕೆ ಭೇಟಿ ನೀಡಿದ್ದರು. ಡಿ.27 ರಿಂದ ಪ್ರಾರಂಭವಾಗಿರುವ ಮೇಳಕ್ಕೆ 2 ಲಕ್ಷಕ್ಕೂ ಅಧಿಕ ಜನರು ಭೇಟಿ ನೀಡಿದ್ದಾರೆ. ಇನ್ನೂ 4 ರಿಂದ 5 ಲಕ್ಷ ಜನರು ಭೇಟಿ ನೀಡುವ ನಿರೀಕ್ಷೆಯಿದೆ. ಈ ವರ್ಷ ಮೇಳದಲ್ಲಿ ಖಾದ್ಯಗಳನ್ನು ಸವಿಯದೆ ಯಾರೂ ಮನೆಗೆ ಹೋಗದಂತೆ ಉತ್ತಮ ತಯಾರಿಯನ್ನು ಕೈಗೊಳ್ಳಾಗಲಿದೆ ಎಂದರು.

ನ್ಯಾಯಕ್ಕಾಗಿ ಸಿಬಿಐ ತನಿಖೆಗೆ ಸಚಿನ್ ಕುಟುಂಬವೂ ಒತ್ತಾಯಿಸಿದೆ: ವಿಜಯೇಂದ್ರ

ಆತ್ಮಹತ್ಯೆ ಪ್ರಕರಣ; ಸಿಬಿಐ ತನಿಖೆಗೆ ಆಗ್ರಹ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಸಚಿನ್ ಪಾಂಚಾಳ ಸಾವಿನ ಪ್ರಕರಣದ ಸಂಬಂಧ ಸಚಿವ ಪ್ರಿಯಾಂಕ್ ಖರ್ಗೆಯವರ ರಾಜೀನಾಮೆ ಪಡೆದು, ದುರ್ಘಟನೆಯ ಬಗ್ಗೆ ಸಿಬಿಐ ತನಿಖೆ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನ್ಯಾಯಕ್ಕಾಗಿ ಸಿಬಿಐ ತನಿಖೆಗೆ ಸಚಿನ್ ಕುಟುಂಬವೂ ಒತ್ತಾಯಿಸಿದೆ. ಹಿಂದೆ, ಇದೇ ಸರಕಾರದ ಸಚಿವ ನಾಗೇಂದ್ರ ಅವರು ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ. ಒಂದು ಕ್ಷಣವೂ ತಡ ಮಾಡದೆ, ಪ್ರಿಯಾಂಕ ಖರ್ಗೆಯವರ ರಾಜೀನಾಮೆ ಪಡೆದುಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಆಗ್ರಹಿಸಿದರು. ಯಾರನ್ನೂ ಉಳಿಸುವ, ರಕ್ಷಿಸುವ ದುಸ್ಸಾಹಸ ಬೇಡ ಎಂದು ಎಚ್ಚರಿಸಿದರು.

ಮೇಧಾವಿ ಪ್ರಿಯಾಂಕ್ ಖರ್ಗೆಗೆ ಮರೆವು ಜಾಸ್ತಿ. ಹಿಂದೆ ಬಿಜೆಪಿ ಸರಕಾರ ಅಧಿಕಾರದಲ್ಲಿದ್ದಾಗ ಈಶ್ವರಪ್ಪ ಅವರ ಮೇಲೆ ಆರೋಪ ಬಂದಾಗ, ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟದ್ದನ್ನು ಪ್ರಿಯಾಂಕ್ ಮರೆಯಬಾರದು. ಮಡಿಕೇರಿಯಲ್ಲಿ ಪೊಲೀಸ್ ಅಧಿಕಾರಿ ಗಣಪತಿ ಆತ್ಮಹತ್ಯೆ ಮಾಡಿಕೊಂಡಿದ್ದು, ಇದೇ ಸಿದ್ದರಾಮಯ್ಯನವರು ಸಿಎಂ ಆಗಿದ್ದಾಗ ಆ ಪ್ರಕರಣದಲ್ಲಿ ಅಂದಿನ ಗೃಹ ಸಚಿವ ಜಾರ್ಜ್ ಅವರು ಕೂಡ ರಾಜೀನಾಮೆ ಕೊಟ್ಟು, ಸಿಬಿಐ ತನಿಖೆ ಆಗಿ ಕ್ಲೀನ್ ಚಿಟ್ ಬಂದಿತ್ತು ಎಂದರು.

